ಸಂಪುಟ : 11 ಸಂಚಿಕೆ: 92 ಪುಟ : 4+2 ಬೆಲೆ: 3.00 ಮಂಗಳವಾರ ಮೇ 12 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 92 Pages : 4+2 Price : 3.00 Tuesday May 12 22026 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸರಗಳ್ಳತನ ಪ್ರಕರಣಗಳ ಆರೋಪಿಗೆ ಜೈಲು ಶಿಕ್ಷೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಧಾರವಾಡ ನಗರದ ವಿದ್ಯಾಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಹಿಳೆಯರ ಕತ್ತಿನಲ್ಲಿದ್ದ ಬಂಗಾರದ ಸರ ಹಾಗೂ ಮಂಗಳಸೂತ್ರ ಕಳವು ಮಾಡುತ್ತಿದ್ದ ಆರೋಪಿಗೆ ನ್ಯಾಯಾಲಯ ಜೈಲು ಶಿಕ್ಷೆ ವಿಧಿಸಿದೆ.

ಆರೋಪಿತ ವಿಶ್ವನಾಥ ಉರ್ಫ್ ವಿಶ್ವ ಸೋಮಪ್ಪ ಕೋಳಿವಾಡ ಎಂಬಾತ ಮಹಿಳೆಯರ ಕತ್ತಿನಲ್ಲಿದ್ದ ಬಂಗಾರದ ಚೈನ್ ಮತ್ತು ಮಂಗಳಸೂತ್ರಗಳನ್ನು ಕಿತ್ತು ಪರಾರಿಯಾಗುತ್ತಿದ್ದ ಪ್ರಕರಣಗಳು ದಾಖಲಾಗಿದ್ದವು.

ಈ ಪ್ರಕರಣಗಳ ವಿಚಾರಣೆ ನಡೆಸಿದ ಧಾರವಾಡ 3ನೇ ಎಸಿಜೆಎಂ ನ್ಯಾಯಾಲಯದ ನ್ಯಾಯಾಧೀಶ ಅಲ್ಲಪ್ಪ ಎಂ. ಬಡಿಗೇರ ಅವರು ಆರೋಪಿಗೆ 9 ಪ್ರಕರಣಗಳಲ್ಲಿ ತಲಾ 2 ವರ್ಷ ಜೈಲು ಶಿಕ್ಷೆ ಹಾಗೂ ರೂ. 5 ಸಾವಿರ ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

ಪ್ರಕರಣಗಳ ತನಿಖೆಯನ್ನು ಅಂದಿನ ಪೊಲೀಸ್ ಇನ್ಸ್‌ಪೆಕ್ಟರ್ ಜಗದೀಶ ಹಂಚಿನಾಳ ಹಾಗೂ ಸೋಮನಾಥ ಹಿರೇಮಠ ನಡೆಸಿದ್ದರು. ಸರ್ಕಾರದ ಪರವಾಗಿ ಹಿರಿಯ ಸಹಾಯಕ ಸರ್ಕಾರಿ ವಕೀಲ ಅನಿಲಕುಮಾರ ಆರ್. ತೊರವಿ ವಾದ ಮಂಡಿಸಿದ್ದರು.

## ಡಿ. ಸುಧಾಕರ್ ನಿಧನಕ್ಕೆ ಸಚಿವ ಎಚ್.ಕೆ. ಪಾಟೀಲ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ



ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಡಿ. ಸುಧಾಕರ್ ಅವರ ಅಗಲಿಕೆಗೆ ಸಚಿವ ಡಾ. ಎಚ್.ಕೆ. ಪಾಟೀಲ ಸಂತಾಪ ಸೂಚಿಸಿದರು.

"ಡಿ. ಸುಧಾಕರ್ ಅವರ ನಿಧನ ಮಧ್ಯ ಕರ್ನಾಟಕ ಭಾಗಕ್ಕೆ ಅಪಾರ ನಷ್ಟ ಉಂಟುಮಾಡಿದೆ. ಸರಳತೆ, ಸೌಜನ್ಯ ಹಾಗೂ ಜನಪರ ಮನೋಭಾವದಿಂದ ಜನರ ಮನಸ್ಸು ಗೆದ್ದ ನಾಯಕರು ಅವರು. ರೈತರು, ಬಡವರು ಹಾಗೂ ಸಾಮಾನ್ಯ ಜನರ ಪರ ಸದಾ ಧ್ವನಿಯಾಗಿದ್ದರು" ಎಂದು ಸಚಿವರು ಹೇಳಿದರು. ಸಾರ್ವಜನಿಕ ಬದುಕಿನಲ್ಲಿ ಶಿಸ್ತು, ನಿಷ್ಠೆ ಹಾಗೂ ಬದ್ಧತೆಯಿಂದ ಕಾರ್ಯನಿರ್ವಹಿಸಿದ ಅವರು ಚಿತ್ರದುರ್ಗ ಜಿಲ್ಲೆಯ ಅಭಿವೃದ್ಧಿಗೆ ವಿಶೇಷ ಕಾಳಜಿ ವಹಿಸಿದ್ದರು. ಅವರ ಅಗಲಿಕೆಯಿಂದ ರಾಜ್ಯ ಅನುಭವಸಂಪನ್ನ ನಾಯಕನನ್ನು ಕಳೆದುಕೊಂಡಿದೆ ಎಂದು ಸಚಿವರು ಸಂತಾಪ ವ್ಯಕ್ತಪಡಿಸಿದರು.

### ತೋಂಟದಾರ್ಯ ಜಾತ್ರೆ ದುರಂತ-ಗಾಯಾಳುಗಳಿಗೆ ₹50 ಸಾವಿರವರೆಗೆ ಚಿಕಿತ್ಸಾ ನೆರವು: ಸಚಿವ ಎಚ್.ಕೆ. ಪಾಟೀಲ

# "ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ"

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ತೋಂಟದಾರ್ಯ ಮಠದ ಜಾತ್ರೆ ಆವರಣದಲ್ಲಿ ನಡೆದ ಅವಘಡದಲ್ಲಿ ಗಾಯಗೊಂಡವರ ಆರೋಗ್ಯ ವಿಚಾರಿಸಲು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಸೋಮವಾರ ಗದಗದ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆಸ್ಪತ್ರೆಗೆ ಭೇಟಿ ನೀಡಿದರು.

ಗಾಯಾಳುಗಳನ್ನು ಭೇಟಿಯಾಗಿ ಆರೋಗ್ಯ ಸ್ಥಿತಿ ಕುರಿತು ವೈದ್ಯರಿಂದ ಮಾಹಿತಿ ಪಡೆದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಅವಘಡದಲ್ಲಿ ಒಟ್ಟು 17 ಜನರು ಗಾಯಗೊಂಡಿದ್ದು, ಎಲ್ಲರಿಗೂ ತಕ್ಷಣ ಚಿಕಿತ್ಸೆ ನೀಡಲಾಗಿದೆ ಎಂದು ತಿಳಿಸಿದರು.

ಹಿರಿಯ ವೈದ್ಯರು ಹಾಗೂ ಅಧಿಕಾರಿಗಳು ನಿರಂತರವಾಗಿ ಗಾಯಾಳುಗಳ ಆರೋಗ್ಯದ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ಗಾಯಾಳುಗಳಲ್ಲಿ ಒಬ್ಬರನ್ನು ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

▶▶ 3ನೇ ಪುಟಕ್ಕೆ

> "ಗಾಯಾಳುಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಲಾಗುತ್ತಿದೆ. ಚಿಕಿತ್ಸಾ ವೆಚ್ಚಕ್ಕಾಗಿ ಮುಖ್ಯಮಂತ್ರಿಗಳು ಗರಿಷ್ಠ ₹50 ಸಾವಿರವರೆಗೆ ನೆರವು ನೀಡಲು ಆದೇಶಿಸಿದ್ದಾರೆ"
> **– ಡಾ. ಎಚ್.ಕೆ. ಪಾಟೀಲ,**
> ಜಿಲ್ಲಾ ಉಸ್ತುವಾರಿ ಸಚಿವರು



### ತೋಂಟದಾರ್ಯ ಜಾತ್ರೆ ಅವಧಿ ಕುರಿತು ಸಮಿತಿ ನಿರ್ಧಾರ

ತೋಂಟದಾರ್ಯ ಮಠದ ಜಾತ್ರೆಯ ಅವಧಿಯನ್ನು ಸೀಮಿತಗೊಳಿಸುವ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮಠದ ಶ್ರೀಗಳು ಹಾಗೂ ಜಾತ್ರಾ ಸಮಿತಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಿ ಎಂದು ಹೇಳಿದರು.

### ಜಾತ್ರೆ ಆಯೋಜಕರಿಗೆ ಸಚಿವರ ಎಚ್ಚರಿಕೆ

ಜಾತ್ರೆಗಳಲ್ಲಿ ಮನರಂಜನಾ ಆಟಗಳು ಹಾಗೂ ಇತರೆ ವ್ಯವಸ್ಥೆಗಳ ಗುತ್ತಿಗೆ ಪಡೆದವರು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡಬೇಕು ಎಂದು ಸಚಿವರು ಹೇಳಿದರು.

ಇಂತಹ ಅವಘಡಗಳು ಮರುಕಳಿಸದಂತೆ ಮುಂದಿನ ದಿನಗಳಲ್ಲಿ ಕಟ್ಟುನಿಟ್ಟಿನ ಮುನ್ನೆಚ್ಚರಿಕಾ ಕ್ರಮ ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

### "ಚಿನ್ನ ಖರೀದಿಸಬೇಡಿ ಎಂದಿರುವುದರ ಹಿಂದಿನ ಕಾರಣ ಬಹಿರಂಗಪಡಿಸಲಿ" : ಎಚ್.ಕೆ. ಪಾಟೀಲ

# ಮೋದಿ ಹೇಳಿಕೆಗಳಿಂದ ಜನರಲ್ಲಿ ಭೀತಿ!

■ವಿಜಯಸಾಕ್ಷಿ ಸುದ್ದಿ, ಗದಗ

ಚಿನ್ನ ಖರೀದಿಸಬೇಡಿ ಹಾಗೂ ಸಮೂಹ ಸಾರಿಗೆ ಬಳಸಿ ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಇತ್ತೀಚಿನ ಹೇಳಿಕೆಗಳು ಜನರಲ್ಲಿ ಅನಗತ್ಯ ಭೀತಿ ಮತ್ತು ಆತಂಕ ಸೃಷ್ಟಿಸುತ್ತಿವೆ ಎಂದು ಕಾನೂನು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಆರೋಪಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ತೈಲ ಅಭಾವ ಉಂಟಾಗುವ ಆತಂಕದ ಸಂದೇಶವನ್ನು ಪ್ರಧಾನಿ ಹೇಳಿಕೆಗಳು ನೀಡುತ್ತಿವೆ ಎಂದು ಹೇಳಿದರು.



ಇಂತಹ ಗಂಭೀರ ವಿಚಾರಗಳನ್ನು ಸಾರ್ವಜನಿಕವಾಗಿ ಹೇಳುವ ಮೊದಲು ಸಂಸತ್ತಿನಲ್ಲಿ ಚರ್ಚಿಸಬೇಕಾಗಿತ್ತು. ಇತ್ತೀಚೆಗೆ ಅಧಿವೇಶನ ನಡೆದಿದ್ದರೂ ಈ ಕುರಿತು ಯಾವುದೇ ಚರ್ಚೆ ನಡೆಸದೇ ಇದೀಗ ಜನರಲ್ಲಿ ಆತಂಕ ಮೂಡಿಸುವ ರೀತಿಯಲ್ಲಿ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ಟೀಕಿಸಿದರು.

ಪ್ರಧಾನಿಯವರು ಕೇವಲ ಎಚ್ಚರಿಕೆ ನೀಡುವುದಕ್ಕಿಂತ, ಅದನ್ನು ಎದುರಿಸಲು ಕೇಂದ್ರ ಸರ್ಕಾರ ಕೈಗೊಂಡಿರುವ ಕ್ರಮಗಳು ಹಾಗೂ ರಾಜ್ಯಗಳಿಗೆ ನೀಡಿರುವ ಸೂಚನೆಗಳ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಪ್ರಸ್ತುತ ಜಾಗತಿಕ ಪರಿಸ್ಥಿತಿಯನ್ನು ಗಮನಿಸಿದರೆ ಅಂತಹ ದೊಡ್ಡ ಅಪಾಯದ ಸನ್ನಿವೇಶಗಳು ಗೋಚರಿಸುತ್ತಿಲ್ಲ. ಆದರೂ ಪ್ರಧಾನಿ ಇಂತಹ ಹೇಳಿಕೆ ನೀಡಲು ಕಾರಣವಾದ ಅಂಶಗಳನ್ನು ಜನರ ಮುಂದೆ ಇಡಬೇಕು ಎಂದು ಹೇಳಿದರು.

ಹಿಂದೆ ನೋಟು ಅಮಾನ್ಯೀಕರಣದ ಮೂಲಕ ಜನರನ್ನು ಸಂಕಷ್ಟಕ್ಕೆ ದೂಡಲಾಗಿತ್ತು. ಈಗ ಚಿನ್ನ ಖರೀದಿಸಬೇಡಿ ಎಂದು ಹೇಳಲಾಗುತ್ತಿದೆ. ಇದರ ಹಿಂದಿನ ನಿಜವಾದ ಉದ್ದೇಶವನ್ನು ಪ್ರಧಾನಿ ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

> "ಚಿನ್ನ ಖರೀದಿಸಬೇಡಿ, ಸಮೂಹ ಸಾರಿಗೆ ಬಳಸಿ ಎಂಬ ಪ್ರಧಾನಿ ಮೋದಿ ಹೇಳಿಕೆಗಳು ಜನರಲ್ಲಿ ಅನಗತ್ಯ ಆತಂಕ ಸೃಷ್ಟಿಸುತ್ತಿವೆ. ಇದರ ಹಿಂದಿನ ನಿಜವಾದ ಕಾರಣವನ್ನು ಕೇಂದ್ರ ಸರ್ಕಾರ ಸ್ಪಷ್ಟಪಡಿಸಬೇಕು."
> **– ಎಚ್.ಕೆ. ಪಾಟೀಲ**
> ಕಾನೂನು ಮತ್ತು ಪ್ರವಾಸೋದ್ಯಮ ಸಚಿವರು

ಬೆಂಗಳೂರಿನ ಧಾರ್ಮಿಕ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ನೀಡಿದ ರಾಜಕೀಯ ಹೇಳಿಕೆಗಳ ಕುರಿತು ಪ್ರತಿಕ್ರಿಯಿಸಿದ ಎಚ್.ಕೆ. ಪಾಟೀಲ, ಧಾರ್ಮಿಕ ವೇದಿಕೆಯಲ್ಲಿ ರಾಜಕೀಯ ಮಾತುಗಳನ್ನು ಆಡುವುದು ಪ್ರಧಾನಿ ಹುದ್ದೆಗೆ ಶೋಭೆಯಲ್ಲ ಎಂದು ಹೇಳಿದರು.

ಬೇರೆ ಪಕ್ಷಗಳ ಆಂತರಿಕ ವಿಚಾರಗಳ ಬಗ್ಗೆ ಆಸಕ್ತಿ ತೋರಿಸುತ್ತಿರುವ ಪ್ರಧಾನಿ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರ ಮಟ್ಟಕ್ಕೆ ಇಳಿದು ಮಾತನಾಡುತ್ತಿರುವುದು ದೇಶಕ್ಕೆ ಅಪಮಾನಕರ ಎಂದು ಟೀಕಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಪ್ರಧಾನಿ ಮೋದಿಯವರಿಗೆ ಏಕೆ ಇಷ್ಟೊಂದು ಭಯ ಎಂದು ಪ್ರಶ್ನಿಸಿದರು.

# ಲಕ್ಕುಂಡಿಯಲ್ಲಿ ಪುರಾತತ್ವ ಅವಶೇಷಗಳ ಅನಾವರಣ



■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಕುಂಡಿಯಲ್ಲಿ ನಡೆಯುತ್ತಿರುವ ಪುರಾತತ್ವ ಅವಶೇಷ ಸಪ್ತಾಹಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ ಎಂದು ಸಚಿವ ಡಾ. ಎಚ್.ಕೆ ಪಾಟೀಲ ಹೇಳಿದರು. ಈಗಾಗಲೇ 1300ಕ್ಕೂ ಹೆಚ್ಚು ಪುರಾತತ್ವ ಅವಶೇಷಗಳನ್ನು ಗುರುತಿಸಿ ಹೊರತರುವ ಕಾರ್ಯ ನಡೆದಿದೆ ಎಂದು ತಿಳಿಸಿದ ಸಚಿವರು,

ರಾಷ್ಟ್ರಕೂಟ ಹಾಗೂ ಹೊಯ್ಸಳರ ಕಾಲಕ್ಕೆ ಸೇರಿದ ಅಮೂಲ್ಯ ಶಿಲ್ಪಗಳು ಮತ್ತು ಪುರಾತತ್ವ ಅವಶೇಷಗಳು ಪತ್ತೆಯಾಗಿದ್ದು, ಲಕ್ಕುಂಡಿ ದೇಶದ ಪ್ರಮುಖ ಪುರಾತತ್ವ ತಾಣಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ ಎಂದರು.

ಲಕ್ಕುಂಡಿಯಲ್ಲಿ ಸುಮಾರು ₹10 ಕೋಟಿ ವೆಚ್ಚದಲ್ಲಿ ಉತ್ಖನನ ಕಾರ್ಯ ನಡೆಯುತ್ತಿದ್ದು, ಇದು ಐತಿಹಾಸಿಕ ಹಾಗೂ ಸಾಂಸ್ಕೃತಿಕವಾಗಿ ಮಹತ್ವದ ಯೋಜನೆಯಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ವಿವರಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಎಸ್.ಎನ್. ಬಳ್ಳಾರಿ, ಸಿದ್ದು ಪಾಟೀಲ, ಪ್ರಭು ಬುರಬುರೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಡಿವೈಎಸ್ಪಿ ಮುರ್ತುಜಾ ಖಾದ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಸುರಕ್ಷಿತ ಕಟ್ಟಡದಲ್ಲಿ ಅಲ್ಪಸಂಖ್ಯಾತರ ಮಹಿಳಾ ಕಾಲೇಜು ಆರಂಭಕ್ಕೆ ಒತ್ತಾಯ

# ಅಸುರಕ್ಷಿತ ಪ್ರದೇಶದಲ್ಲಿ ಮಹಿಳಾ ಕಾಲೇಜು ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದಲ್ಲಿ ಆರಂಭವಾಗಲಿರುವ ಸರ್ಕಾರಿ ಅಲ್ಪಸಂಖ್ಯಾತರ ಮಹಿಳಾ ಕಾಲೇಜನ್ನು ಸುರಕ್ಷಿತ ಹಾಗೂ ನಗರದ ಮಧ್ಯಭಾಗದಲ್ಲಿರುವ ಕಟ್ಟಡದಲ್ಲಿ ಪ್ರಾರಂಭಿಸಬೇಕು ಎಂದು ಒತ್ತಾಯಿಸಿ ಗದಗ-ಬೆಟಗೇರಿ ಮುಸ್ಲಿಂ ಸಮಾಜ ವೇದಿಕೆಯ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.



ರಾಜ್ಯ ಸರ್ಕಾರ ಅಲ್ಪಸಂಖ್ಯಾತರ ಮಹಿಳೆಯರ ಶೈಕ್ಷಣಿಕ ಪ್ರಗತಿಗಾಗಿ ಮಹಿಳಾ ಕಾಲೇಜು ಮಂಜೂರು ಮಾಡಿರುವುದನ್ನು ಸ್ವಾಗತಿಸಿದ ಪ್ರತಿಭಟನಾಕಾರರು, ನಗರದ ಹೊರವಲಯದಲ್ಲಿರುವ ಹಾಗೂ ಸಾರಿಗೆ ಸೌಲಭ್ಯವಿಲ್ಲದ ಪ್ರದೇಶದಲ್ಲಿ ಕಾಲೇಜು ಆರಂಭಿಸಲು ಮುಂದಾಗಿರುವ ಅಧಿಕಾರಿಗಳ ಕ್ರಮವನ್ನು ಖಂಡಿಸಿದರು.

▶▶ 3ನೇ ಪುಟಕ್ಕೆ

> "ಅಲ್ಪಸಂಖ್ಯಾತರ ಮಹಿಳಾ ಕಾಲೇಜು ವಿದ್ಯಾರ್ಥಿನಿಯರ ಸುರಕ್ಷತೆ ದೃಷ್ಟಿಯಿಂದ ನಗರದ ಮಧ್ಯಭಾಗದಲ್ಲಿಯೇ ಆರಂಭವಾಗಬೇಕು. ಅಸುರಕ್ಷಿತ ಪ್ರದೇಶದಲ್ಲಿ ಕಾಲೇಜು ಆರಂಭಿಸಲು ನಾವು ಅವಕಾಶ ನೀಡುವುದಿಲ್ಲ."
> **– ಮಹ್ಮದ್ ಯೂಸುಫ್ ನಮಾಜಿ,**
> ಅಧ್ಯಕ್ಷರು, ಮುಸ್ಲಿಂ ಸಮಾಜ ವೇದಿಕೆ

### ರಾಜ್ಯದಲ್ಲಿ ಬಿಜೆಪಿ ಅಲೆ ಶುರು : ಬಸವರಾಜ ಬೊಮ್ಮಾಯಿ

# 2028ಕ್ಕೆ ಕಮಲ ಅರಳುವುದು ನಿಶ್ಚಿತ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿ ಬಿಜೆಪಿ ಸಂಘಟನೆ ಬಲಿಷ್ಠವಾಗಿದ್ದು, 2028ರ ವಿಧಾನಸಭೆ ಚುನಾವಣೆಯಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ವಿಶ್ವಾಸ ವ್ಯಕ್ತಪಡಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ನೀಡಿರುವ ಹೇಳಿಕೆಗೆ ಪ್ರತಿಕ್ರಿಯೆ ನೀಡಿದರು.

▶▶ 4ನೇ ಪುಟಕ್ಕೆ




> "ಕರ್ನಾಟಕದಲ್ಲಿ ಬಿಜೆಪಿಯ ಬೇರುಗಳು ಗಟ್ಟಿಯಾಗಿವೆ. ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ಅಸಮಾಧಾನ ಹೆಚ್ಚಾಗಿದೆ. 2028ರಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರಲಿದೆ."
> – ಬಸವರಾಜ ಬೊಮ್ಮಾಯಿ
> ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರು

## ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ



ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ವತಿಯಿಂದ 2025–26ನೇ ಸಾಲಿನ ಎಸ್ಎಸ್ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕ ಗಳಿಸಿರುವ ಗದಗ ಜಿಲ್ಲಾ ಗಾಣಿಗ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಇದೇ ವೇಳೆ 2025–26ನೇ ಸಾಲಿನಲ್ಲಿ ನಿವೃತ್ತರಾಗಿರುವ ಗದಗ ಜಿಲ್ಲಾ ಗಾಣಿಗ ಸಮಾಜದ ನಿವೃತ್ತ ಸರ್ಕಾರಿ ನೌಕರರನ್ನು ಸನ್ಮಾನಿಸಿ ಗೌರವಿಸಲಾಗುವುದು ಎಂದು ಟ್ರಸ್ಟ್ ತಿಳಿಸಿದೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಹ ವಿದ್ಯಾರ್ಥಿಗಳು ಜೂನ್ 1ರೊಳಗಾಗಿ ಅಂಕಪಟ್ಟಿಯ ನಕಲು ಪ್ರತಿ ಹಾಗೂ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರದೊಂದಿಗೆ ಮಾಹಿತಿ ಸಲ್ಲಿಸಬೇಕು ಎಂದು ಸೂಚಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಹಾಗೂ ನಿವೃತ್ತ ನೌಕರರು ವಿವೇಕಾನಂದ ನಗರದ ಗಾಣಿಗ ಭವನ ಕಾರ್ಯಾಲಯ, ಕಾಟನ್ ಮಾರ್ಕೆಟ್ ರಸ್ತೆಯ ಲಕ್ಕುಂಡಿ ಸ್ಟೀಲ್ಸ್, ಎಪಿಎಂಸಿ ಯಾರ್ಡ್‌ನ ಎಂ.ಬಿ. ಬಡ್ನಿ & ಕಂ. ಕಚೇರಿಗಳಿಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 94481 42509, 99450 37111, 77958 26957 ಹಾಗೂ 89705 92837 ಅನ್ನು ಸಂಪರ್ಕಿಸಬಹುದು ಎಂದು ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗ ವರ್ಧಕ ಟ್ರಸ್ಟ್ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ ಸಮಾರೋಪದಲ್ಲಿ ಎಸ್.ಎಸ್. ಪಾಟೀಲ ಅಭಿಮತ

# ಮಕ್ಕಳಿಗಾಗಿ ಒತ್ತಡಮುಕ್ತ ಪರಿಸರ ನಿರ್ಮಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಬಾಲ್ಯವನ್ನು ಸುಂದರಗೊಳಿಸುವ ಕಾರ್ಯ ಮನೆಯಿಂದಲೇ ಆರಂಭವಾಗಬೇಕು. ಅಂಕಗಳ ಸ್ಪರ್ಧೆಗೆ ಮಕ್ಕಳನ್ನು ಸಜ್ಜುಗೊಳಿಸುವ ಬದಲು ಅವರು ಬಾಲ್ಯವನ್ನು ಸಂತೋಷದಿಂದ ಕಳೆಯಲು ಒತ್ತಡಮುಕ್ತ ವಾತಾವರಣ ನಿರ್ಮಿಸುವುದು ಅಗತ್ಯವಾಗಿದೆ ಎಂದು ಮಾಜಿ ಸಚಿವ ಎಸ್.ಎಸ್. ಪಾಟೀಲ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಹೈಟೆಕ್ ಕೋಚಿಂಗ್ ಸೆಂಟರ್ ಸಹಯೋಗದಲ್ಲಿ ಗದುಗಿನ ವಿಜಯ ಲಲಿತಕಲಾ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಎರಡು ದಿನಗಳ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಿಂದೆ ಅವಿಭಕ್ತ ಕುಟುಂಬಗಳಲ್ಲಿ ಮಕ್ಕಳಿಗೆ ಪ್ರೀತಿ, ವಾತ್ಸಲ್ಯ, ಸಹಬಾಳ್ವೆ ಮತ್ತು ಸಹಸ್ಪಂದನೆ ಸಹಜವಾಗಿ ದೊರೆಯುತ್ತಿತ್ತು. ಆದರೆ ಇಂದಿನ ಬದಲಾದ ಪರಿಸ್ಥಿತಿಯಲ್ಲಿ ಮಕ್ಕಳು ಮನೆಯಲ್ಲಿ ಅನಾಥ ಪ್ರಜ್ಞೆಗೆ ಒಳಗಾಗುತ್ತಿದ್ದಾರೆ ಎಂದು ವಿಷಾದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಮಕ್ಕಳು ಮೂಲತಃ ಸೃಜನಶೀಲರಾಗಿದ್ದು, ಅವರಿಗೆ ಸೂಕ್ತ ಅವಕಾಶ ಮತ್ತು ಸಂದರ್ಭಗಳನ್ನು ಕಲ್ಪಿಸಿಕೊಡುವುದು ಅಗತ್ಯವಾಗಿದೆ ಎಂದರು.



ಮಾನವೀಯ ಮೌಲ್ಯಗಳು ಬೆಳೆಸಲು ಸಾಹಿತ್ಯ, ಕಲೆ ಮತ್ತು ಸಂಗೀತದ ಆಸಕ್ತಿ ಮುಖ್ಯವಾಗಿದ್ದು, ಈ ಹಿನ್ನೆಲೆಯಲ್ಲಿ ಮಕ್ಕಳ ಪ್ರತಿಭೆಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಸಮ್ಮೇಳನವನ್ನು ಪ್ರಾಯೋಗಿಕವಾಗಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕಸಾಪ ಮಾಜಿ ಅಧ್ಯಕ್ಷ ಡಾ. ಶಿವಪ್ಪ ಕುರಿ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತು ಮಕ್ಕಳಿಗಾಗಿ ಆಯೋಜಿಸಿರುವ ಈ ಸಮ್ಮೇಳನ ಮಾದರಿಯಾಗಿದೆ. ಬಾಲ್ಯದಲ್ಲಿಯೇ ಮಕ್ಕಳಲ್ಲಿ ಸಾಹಿತ್ಯ, ಕಲೆ ಮತ್ತು ಸೃಜನಶೀಲತೆಯ ಆಸಕ್ತಿ ಬೆಳೆಸಲು ಇಂತಹ ಕಾರ್ಯಕ್ರಮಗಳು ಅಗತ್ಯ ಎಂದು ಹೇಳಿದರು.

ಸಮ್ಮೇಳನಾಧ್ಯಕ್ಷ ತಯಬಅಲಿ ಹೊಂಬಳ ಮಾತನಾಡಿ, ಮಕ್ಕಳ ಸಾಹಿತ್ಯ ಕೃತಿಗಳನ್ನು ಸರ್ಕಾರ ನಿರಂತರವಾಗಿ ಖರೀದಿಸುವ ಪ್ರಕ್ರಿಯೆ ಕೈಗೊಳ್ಳಬೇಕು. ಮಕ್ಕಳ ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಹಿರಿಯ ಸಾಹಿತಿಗಳನ್ನು ಜಿಲ್ಲಾ ಮಟ್ಟದಲ್ಲಿ ಗುರುತಿಸಿ ಗೌರವಿಸಬೇಕು ಎಂದು ಹೇಳಿದರು.

> “ಮಕ್ಕಳ ಕ್ರಿಯಾಶೀಲತೆಗೆ ಅವಕಾಶ ಕಲ್ಪಿಸಿದರೆ ಅವರ ಪ್ರತಿಭೆ ಅನಾವರಣಗೊಳ್ಳುತ್ತದೆ. ಅಂಕಗಳಿಗಿಂತ ಬಾಲ್ಯದ ಸಂತೋಷ ಮುಖ್ಯ. ಮಕ್ಕಳಿಗೆ ಒತ್ತಡಮುಕ್ತ ವಾತಾವರಣ ಕಲ್ಪಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.”
> – **ಎಸ್.ಎಸ್. ಪಾಟೀಲ,** ಮಾಜಿ ಸಚಿವ

ಈ ಸಂದರ್ಭದಲ್ಲಿ ತಯಬಅಲಿ ಹೊಂಬಳ ದಂಪತಿಗಳನ್ನು ಸನ್ಮಾನಿಸಲಾಯಿತು. ಸಮ್ಮೇಳನದ ವಿವಿಧ ವಿಭಾಗಗಳಲ್ಲಿ ಮಕ್ಕಳು ರಚಿಸಿದ ಕಥೆ ಮತ್ತು ಕವಿತೆಗಳ ಕರಡು ಸಂಕಲನವನ್ನು ಲೋಕಾರ್ಪಣೆಗೊಳಿಸಲಾಯಿತು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಕ್ಕಳಾದ ಪ್ರವೀಣಕುಮಾರ ಸೊಬಗಿನ, ರಾಧಿಕಾ ತೊಂಡಿಹಾಳ, ತನುಶ್ರೀ ಬಡಿ, ಪ್ರಣತಿ ಆರ್. ಗಡಾದ, ಬಿ.ಭೀ. ನಾಗನೂರ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಎಂ.ಎಸ್. ಹುಲ್ಲೂರ, ಡಾ. ಶರಣಬಸವೇಶ ಆಲೂರ, ರತ್ನಕ್ಕ ಪಾಟೀಲ, ಸಂಜಯ ಬಾಗಮಾರ, ರಮಾಕಾಂತ ಕಮತಗಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಬಸವರಾಜ ನೆಲಜೇರಿ ಸ್ವಾಗತಿಸಿದರು. ರಾಹುಲ ಗಿಡ್ನಂದಿ ವಂದಿಸಿದರು.

### ಮಕ್ಕಳ ಒಲವಿಗೆ ತಕ್ಕಂತೆ ಸಾಹಿತ್ಯ ರಚನೆ ಅಗತ್ಯ

# ಮಕ್ಕಳ ಮನಸ್ಸು ಗೆಲ್ಲುವ ಸಾಹಿತ್ಯವೇ ಶಾಶ್ವತ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಲ ಬದಲಾಗುತ್ತಿರುವಂತೆ ಕಲಿಕೆಯ ವಿಧಾನಗಳೂ ಬದಲಾಗುತ್ತಿವೆ. ಮಕ್ಕಳ ಆರೋಗ್ಯಕರ ಮನೋವಿಕಾಸ ಹಾಗೂ ಸಾಹಿತ್ಯಾಸಕ್ತಿಗೆ ತಕ್ಕಂತೆ ಸಾಹಿತ್ಯ ರಚನೆಯಾಗಬೇಕು ಎಂದು ಸಾಹಿತಿ ವೀರೇಶ ಮೇಟಿ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಹೈಟೆಕ್ ಕೋಚಿಂಗ್ ಸೆಂಟರ್ ಸಹಯೋಗದಲ್ಲಿ ನಗರದ ವಿಜಯ ಲಲಿತಕಲಾ ಮಹಾವಿದ್ಯಾಲಯದಲ್ಲಿ ನಡೆದ ಮಕ್ಕಳ ಸಾಹಿತ್ಯ ಸಮ್ಮೇಳನದ ಅಂಗವಾಗಿ ಆಯೋಜಿಸಿದ್ದ ಮಕ್ಕಳ ಸಾಹಿತಿಗಳೊಂದಿಗೆ ಸಂವಾದ ಗೋಷ್ಠಿಯಲ್ಲಿ ಅವರು ಮಾತನಾಡಿದರು.

ಇಂದಿನ ಮಕ್ಕಳಲ್ಲಿ ಕ್ಷಣಿಕತೆ ಮತ್ತು ಏಕಾಗ್ರತೆಯ ಕೊರತೆ ಹೆಚ್ಚುತ್ತಿರುವ ಹಿನ್ನೆಲೆ, ಅವರ ಕಲ್ಪನಾ ಲೋಕವನ್ನು ವಿಸ್ತರಿಸಲು ಸಾಹಿತ್ಯಾಭಿರುಚಿ ಅತ್ಯಗತ್ಯವಾಗಿದೆ.



ಶಾಲೆಗಳಲ್ಲಿಯೂ ಸಾಹಿತ್ಯ ಅಧ್ಯಯನಕ್ಕೆ ಹೆಚ್ಚಿನ ಅವಕಾಶ ಕಲ್ಪಿಸಬೇಕು ಎಂದು ಅವರು ಹೇಳಿದರು.

‘ಮಕ್ಕಳ ಸಾಹಿತ್ಯದ ಹೊಸ ಹೊಳಹುಗಳು’ ವಿಷಯವಾಗಿ ಮಾತನಾಡಿದ ಡಾ. ವಿನಾಯಕ ಕಮತದ ಅವರು, ಮಕ್ಕಳ ಪ್ರಶ್ನೆಗಳು ಮತ್ತು ಅವರ ಸಹಜ ಕುತೂಹಲವೇ ಉತ್ತಮ ಮಕ್ಕಳ ಸಾಹಿತ್ಯಕ್ಕೆ ಹೂರಣವಾಗುತ್ತದೆ ಎಂದರು.

“ಮಗುವಿನ ಮನಸ್ಸಿನಲ್ಲಿ ಮೂಡುವ ಸಹಜ ಪ್ರಶ್ನೆಗಳಿಗೆ ಧ್ವನಿಯಾಗದಿದ್ದರೆ ಹೊಸ ಸಾಹಿತ್ಯ ಸೃಷ್ಟಿ ಸಾಧ್ಯವಿಲ್ಲ. ಬಾಲ್ಯದ ನೆನಪುಗಳು ಮತ್ತು ಕಾಡುವ ಚಿಂತನೆಗಳು ಮಕ್ಕಳ ಸಾಹಿತ್ಯವನ್ನು ಗಟ್ಟಿಗೊಳಿಸುತ್ತವೆ” ಎಂದು ತಿಳಿಸಿದರು.

ಸಾಹಿತಿ ಆರ್.ಬಿ. ಗುರುಬಸವರಾಜ ಮಾತನಾಡಿ, ಮಕ್ಕಳಿಗೆ ಸಂಸ್ಕಾರ ಕಲಿಸಲು ಮೊದಲು ಪೋಷಕರು ಪುಸ್ತಕ ಓದುವ ಅಭ್ಯಾಸ ಬೆಳೆಸಬೇಕು ಎಂದು ಸಲಹೆ ನೀಡಿದರು. ಮಕ್ಕಳ ಮಾತುಗಳನ್ನು ಆಲಿಸುವ ಸಂಸ್ಕೃತಿ ಮನೆಗಳಲ್ಲಿ ಕಡಿಮೆಯಾಗುತ್ತಿದೆ ಎಂದು ವಿಷಾದಿಸಿದರು.

> “ಮಕ್ಕಳ ಒಲವಿಗೆ ತಕ್ಕ ಸಾಹಿತ್ಯ ರಚನೆಯಾದಾಗ ಮಾತ್ರ ಅವರಲ್ಲಿ ಸಾಹಿತ್ಯಾಸಕ್ತಿ ಮತ್ತು ಓದುವ ಸಂಸ್ಕೃತಿ ಬೆಳೆಸಲು ಸಾಧ್ಯ.”
> – **ವೀರೇಶ ಮೇಟಿ,** ಸಾಹಿತಿ


“ಅಂಕಗಳ ಒತ್ತಡಕ್ಕಿಂತ ಮಕ್ಕಳ ಅಭಿವ್ಯಕ್ತಿ ಸ್ವಾತಂತ್ರ್ಯ ಮುಖ್ಯ. ಪಠ್ಯದಾಚೆಗಿನ ಕಲಿಕೆ ಜೀವನ ಕೌಶಲ್ಯ ಬೆಳೆಸುತ್ತದೆ” ಎಂದು ಹೇಳಿದರು.

> “ಮಕ್ಕಳ ಪ್ರಶ್ನೆಗಳಲ್ಲೇ ಹೊಸ ಸಾಹಿತ್ಯದ ಬೀಜ ಅಡಗಿದೆ.”
> – ಡಾ. ವಿನಾಯಕ ಕಮತದ, ಸಾಹಿತಿ

ಅಧ್ಯಕ್ಷೀಯ ನುಡಿಗಳನ್ನಾಡಿದ ಡಾ. ರಾಜೇಂದ್ರ ಗಢಾದ ಅವರು, ಮಕ್ಕಳ ಸಾಹಿತ್ಯದಲ್ಲಿ ಹೊಸತನದ ಪ್ರಯೋಗಗಳು ಅಗತ್ಯವಿದ್ದು, ಕಟ್ಟಳೆಗಳನ್ನು ಮೀರಿ ಹೊಸ ಸೃಜನಶೀಲತೆಗೆ ಮಕ್ಕಳ ಸಾಹಿತಿಗಳು ಮುಂದಾಗಬೇಕು ಎಂದು ಕರೆ ನೀಡಿದರು.

ರವಿ ದೇವರಡ್ಡಿ ಕಾರ್ಯಕ್ರಮ ನಿರೂಪಿಸಿದರು. ಚಂದ್ರಕಲಾ ಇಟಗಿಮಠ ಸ್ವಾಗತಿಸಿದರು. ಶಿಲ್ಪಾ ಮ್ಯಾಗೇರಿ ವಂದಿಸಿದರು. ಜಿಲ್ಲೆಯ ವಿವಿಧ ಭಾಗಗಳಿಂದ ಮಕ್ಕಳ ಸಾಹಿತ್ಯಾಸಕ್ತರು ಮತ್ತು ಸಾಹಿತಿಗಳು ಭಾಗವಹಿಸಿದ್ದರು.

## ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತ್ಯುತ್ಸವವನ್ನು ಭಕ್ತಿಭಾವ ಹಾಗೂ ಸಡಗರದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜೀವನ, ತತ್ವಾದರ್ಶಗಳು ಹಾಗೂ ಸಮಾಜಮುಖಿ ಸೇವೆಯನ್ನು ಸ್ಮರಿಸಲಾಯಿತು. 14ನೇ ಶತಮಾನದ ಮಹಾಸಾಧ್ವಿಯಾಗಿದ್ದ ಮಲ್ಲಮ್ಮ ಅವರು ಶ್ರೀಶೈಲ ಚನ್ನಮಲ್ಲಿಕಾರ್ಜುನನ ಪರಮ ಭಕ್ತೆಯಾಗಿದ್ದು, ಬಾಲ್ಯದಿಂದಲೇ ಶಿವಭಕ್ತಿಯಲ್ಲಿ ತೊಡಗಿಸಿಕೊಂಡಿದ್ದರು ಎಂದು ವಕ್ತಾರರು ತಿಳಿಸಿದರು.

ರಾಮಾಪುರದ ರಾಮರೆಡ್ಡಿ ಹಾಗೂ ಗೌರಮ್ಮ ದಂಪತಿಯ ಪುತ್ರಿಯಾಗಿದ್ದ ಮಲ್ಲಮ್ಮ ಅವರು ಕಾಡಿನಲ್ಲಿ ದನಗಳನ್ನು ಮೇಯಿಸುತ್ತಾ ಶಿವನ ಆರಾಧನೆ ಮಾಡುತ್ತಿದ್ದರು.

ಅವರ ಭಕ್ತಿಗೆ ಮೆಚ್ಚಿದ ಶಿವನು ವರ ಕೇಳುವಂತೆ ಹೇಳಿದಾಗ, “ನನ್ನ ಬಳಗಕ್ಕೆ ಬಡತನ ಬಾರದಿರಲಿ” ಎಂದು ಬೇಡಿಕೊಂಡಿದ್ದರು ಎಂಬುದನ್ನು ಕಾರ್ಯಕ್ರಮದಲ್ಲಿ ಸ್ಮರಿಸಲಾಯಿತು.

ದುಷ್ಟ ಚಟಗಳಿಗೆ ಒಳಗಾಗಿದ್ದ ತಮ್ಮ ಮೈದುನನಿಗೆ ಸತ್ಪ್ರವೃತ್ತಿಯ ಮಾರ್ಗದರ್ಶನ ನೀಡಿ ಮಹಾಯೋಗಿ ವೇಮನನ್ನಾಗಿ ರೂಪಿಸಿದ ಮಲ್ಲಮ್ಮನವರ ಜ್ಞಾನ, ತ್ಯಾಗ ಹಾಗೂ ಸಮಾಜದ ಒಳಿತಿಗಾಗಿ ಮಾಡಿದ ಸೇವೆಯನ್ನು ವಕ್ತಾರರು ಕೊಂಡಾಡಿದರು. ಅವರ ಆದರ್ಶಗಳು ಇಂದಿನ ಯುವಪೀಳಿಗೆಗೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು.

ಮಲ್ಲಮ್ಮನವರ ಜೀವನ ಆಧರಿಸಿ 1946ರಲ್ಲಿ “ಹೇಮರೆಡ್ಡಿ ಮಲ್ಲಮ್ಮ” ಹಾಗೂ 2005ರಲ್ಲಿ “ಮಹಾಸಾಧ್ವಿ ಮಲ್ಲಮ್ಮ” ಚಲನಚಿತ್ರಗಳು ನಿರ್ಮಾಣಗೊಂಡಿರುವುದನ್ನೂ ಉಲ್ಲೇಖಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಧಾನ ಗುರು ಹಾಲೇಶ ಜಕ್ಕಲಿ, ಶಿಕ್ಷಕರಾದ ನೆಮೇಶ ಯರಗುಪ್ಪಿ, ಗ್ರಾಮದ ಹಿರಿಯರಾದ ಬಸವರಾಜ ಪಾಟೀಲ, ಗುದ್ಲೆಪ್ಪಗೌಡ ಪಾಟೀಲ, ಮಾಬುಸಾಬ ಮುಂಡರಗಿ, ಸುಗನಹಳ್ಳಿ ಗ್ರಾಮದ ವಿರುಪಾಕ್ಷಯ್ಯ ಹಿರೇಮಠ, ಶಾಲೆಯ ವಿದ್ಯಾರ್ಥಿಗಳು ಹಾಗೂ ಗ್ರಾಮದ ಗುರುಹಿರಿಯರು ಉಪಸ್ಥಿತರಿದ್ದರು.

### ವಿಶ್ವ ತಾಯಂದಿರ ದಿನದಂದು ‘ಜಗವೇ ಪೂಜಿಸುವ ಗುಡಿಯಿರದಾ ದೇವತೆ’ ಹಾಡು ಬಿಡುಗಡೆ ಮಾಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

## ‘ಜನರಿಂದ ನಾನು ಮೇಲೆ ಬಂದೆ’ ಚಿತ್ರದ ಹಾಡು ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಶ್ವ ತಾಯಂದಿರ ದಿನದ ಅಂಗವಾಗಿ ನಿರ್ಮಾಣವಾಗುತ್ತಿರುವ ‘ಜನರಿಂದ ನಾನು ಮೇಲೆ ಬಂದೆ’ ಕನ್ನಡ ಚಲನಚಿತ್ರದ ಭಾವನಾತ್ಮಕ ತಾಯಿ ಹಾಡು ‘ಜಗವೇ ಪೂಜಿಸುವ ಗುಡಿಯಿರದಾ ದೇವತೆ’ ಅನ್ನು ಕೇಂದ್ರ ಸಚಿವೆ ಸಚಿವೆ ಶೋಭಾ ಕರಂದ್ಲಾಜೆ ಬಿಡುಗಡೆ ಮಾಡಿದರು.



ಶ್ರೀ ಮಂಜುನಾಥ ಫಿಲಂಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರದ ಹಾಡು ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, “ತಾಯಿಯ ಮಮತೆಯನ್ನು ಹೃದಯಸ್ಪರ್ಶಿಯಾಗಿ ಚಿತ್ರಿಸಿರುವ ಈ ಹಾಡು ಪ್ರತಿಯೊಬ್ಬರ ಮನಸ್ಸನ್ನು ಮುಟ್ಟುತ್ತದೆ. ನಾಯಕ ನಟ ಗಂಧರ್ವ ರಾಜ್ ಸೇರಿದಂತೆ ಎಲ್ಲ ಕಲಾವಿದರು ಅತ್ಯುತ್ತಮವಾಗಿ ಅಭಿನಯಿಸಿದ್ದಾರೆ” ಎಂದು ಚಿತ್ರತಂಡವನ್ನು ಅಭಿನಂದಿಸಿದರು.

> “ತಾಯಿಯ ಪ್ರೀತಿ ಮತ್ತು ತ್ಯಾಗವನ್ನು ಮನಮುಟ್ಟುವ ರೀತಿಯಲ್ಲಿ ಕಟ್ಟಿಕೊಟ್ಟಿರುವ ಈ ಹಾಡು ಎಲ್ಲರ ಹೃದಯ ತಟ್ಟಲಿದೆ.”
> – **ಶೋಭಾ ಕರಂದ್ಲಾಜೆ,** ಕೇಂದ್ರ ಸಚಿವೆ

ಈ ಹಾಡಿಗೆ ಪೃಥ್ವಿರಾಜ್ ಸಂಕಿ ಸಾಹಿತ್ಯ ಬರೆದಿದ್ದು, ಎ.ಆರ್. ತನ್ವೀರ್ ಧ್ವನಿಯಾಗಿದ್ದಾರೆ. ಪ್ರಣವ್ ಸತೀಶ್ ಸಂಗೀತ ಸಂಯೋಜನೆ ಮಾಡಿದ್ದಾರೆ.

ಚಿತ್ರದಲ್ಲಿ ಗಂಧರ್ವ ರಾಜ್ (ಶಂಕರ್), ಅಭಿಜಿತ್, ಶೈಲಜಾ ದ್ವಾರಕೀಶ್, ಚಾಮರಾಜ್ ಮಾಸ್ಟರ್, ನವಿಲುಗರಿ ನವೀನ್ ಪಿ.ಬಿ., ಶಿವಕುಮಾರ್ ಆರಾಧ್ಯ, ಜಯಪ್ರಕಾಶ್ ನಾಗತಿಹಳ್ಳಿ, ಪ್ರವೀಣ ಕುಲಕರ್ಣಿ, ಸಂದೀಪ್ ಮಲಾನಿ, ಅನಿಲ್ ಕುಮಾರ್ ಬಾಬಿ, ಮಧುಶ್ರೀ ವಸಂತ, ಶಿವಣ್ಣ, ಆಪ್ತಿ ಪಟವರ್ಧನ್, ಕೃತಿಕಾ ದಿವಾಕರ್, ಶಾಂತಾ ಪಾಪು, ಸುನಂದ ಕಲಬುರಗಿ, ಕಾಟೇರ ಕೇಶವ್, ಅಂಬೇಡ್ಕರ್ ಮಹೇಶ್, ಡಾ. ಅಕ್ಷತ, ವಿಶಾಲ ಸತೀಶ್, ಲಲಿತ್ ಕೃಷ್ಣ ಹಾಗೂ ಯಶುರಾಜ್ ಸೇರಿದಂತೆ ದೊಡ್ಡ ತಾರಾಬಳಗ ಅಭಿನಯಿಸಿದೆ.

ಚಿತ್ರದ ಛಾಯಾಗ್ರಹಣ ಮತ್ತು ಸಂಕಲನವನ್ನು ಟಿ.ಆರ್. ಗೌತಮ್ ನಿರ್ವಹಿಸಿದ್ದು, ಸಾಹಿತ್ಯವನ್ನು ನವಿಲುಗರಿ ನವೀನ್ ಪಿ.ಬಿ., ಪೃಥ್ವಿರಾಜ್ ಸಂಕಿ ಹಾಗೂ ಭುವನ್ ಎಂ.ಎಸ್. ರಚಿಸಿದ್ದಾರೆ. ನೃತ್ಯ ನಿರ್ದೇಶನವನ್ನು ಚಾಮರಾಜ್ ಮಾಸ್ಟರ್, ಅರುಣ್ ಮಾಸ್ಟರ್, ಸತೀಶ್ ಕೃಷ್ಣ ಶೆಟ್ಟಿ ಮತ್ತು ಪೂಜಾ ರಾಯಸಂ ಮಾಡಿದ್ದಾರೆ.

ಚಿತ್ರದ ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ನಿರ್ದೇಶನವನ್ನು ನವಿಲುಗರಿ ನವೀನ್ ಪಿ.ಬಿ. ಮಾಡಿದ್ದಾರೆ. ಲಲಿತ್ ಕೃಷ್ಣ ಸಹಾಯಕ ನಿರ್ದೇಶಕರಾಗಿದ್ದು, ಶ್ರೀಮತಿ ಬಿ. ಹೇಮಾವತಿ ನಿರ್ಮಾಪಕರಾಗಿದ್ದಾರೆ.

ಮ್ಯೂಸಿಕ್ ಬಜಾರ್ ಯೂಟ್ಯೂಬ್ ಚಾನೆಲ್‌ನಲ್ಲಿ ಹಾಡು ಬಿಡುಗಡೆಯಾಗಿದ್ದು, ಚಿತ್ರವೂ ಶೀಘ್ರದಲ್ಲೇ ರಾಜ್ಯಾದ್ಯಂತ ತೆರೆ ಕಾಣಲಿದೆ ಎಂದು ಚಿತ್ರತಂಡ ತಿಳಿಸಿದೆ.

### ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ ಅಂಗವಾಗಿ ಮಕ್ಕಳ ಕವಿಗೋಷ್ಠಿ

# ಮಕ್ಕಳ ಕಾವ್ಯದ ಭಾಷೆ ಸುಲಲಿತವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಕಾವ್ಯದ ಭಾಷೆ ಸರಳ ಮತ್ತು ಸುಲಲಿತವಾಗಿದ್ದಾಗ ಮಾತ್ರ ಅದು ಮಕ್ಕಳ ಮನಸ್ಸನ್ನು ತಟ್ಟಲು ಸಾಧ್ಯವಾಗುತ್ತದೆ ಎಂದು ಹಿರಿಯ ಸಾಹಿತಿ ನೀ. ಶ್ರೀಶೈಲ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಎಂ.ಎಸ್. ಹುಲ್ಲೂರ ಹೈಟೆಕ್ ಕೋಚಿಂಗ್ ಸೆಂಟರ್ ಸಹಯೋಗದಲ್ಲಿ ಗದುಗಿನ ವಿಜಯ ಲಲಿತಕಲಾ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಕ್ಕಳ ಸಾಹಿತ್ಯ ಸಮ್ಮೇಳನ ಅಂಗವಾಗಿ ನಡೆದ ಮಕ್ಕಳ ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆರಂಭದಲ್ಲಿ ಪ್ರಾಸಪದಗಳು ಮಕ್ಕಳನ್ನು ಆಕರ್ಷಿಸುತ್ತವೆ. ಮಕ್ಕಳ ಭಾಷಾ ಕೌಶಲ್ಯ ಹಾಗೂ ಸಂವಹನ ಸಾಮರ್ಥ್ಯ ವೃದ್ಧಿಸಲು ಕವಿತೆಗಳು ಸಹಕಾರಿಯಾಗುತ್ತವೆ ಎಂದು ಹೇಳಿದರು.

ಮಕ್ಕಳ ಕವಿತೆಗಳ ಅಧ್ಯಯನ ಶಿಬಿರಗಳನ್ನು ಆಯೋಜಿಸಬೇಕು. ಹಿರಿಯ ಕವಿಗಳು ತಮ್ಮ ಕವಿತೆಗಳನ್ನು ಮಕ್ಕಳ ಮುಂದೆ ವಾಚನ ಮಾಡಬೇಕು. ಮಕ್ಕಳು ಪ್ರಶ್ನೆ ಕೇಳಲು ಅವಕಾಶ ನೀಡುವುದರಿಂದ ಹೊಸದಾಗಿ ಬರೆಯುವ ಮಕ್ಕಳಿಗೆ ಪ್ರೇರಣೆ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು.

ಡಿಜಿಟಲ್ ವ್ಯಸನ ಹೆಚ್ಚುತ್ತಿರುವ ಇಂದಿನ ಸಂದರ್ಭದಲ್ಲಿ ಮಕ್ಕಳಲ್ಲಿ ಸಾಹಿತ್ಯದ ಆಸಕ್ತಿ ಬೆಳೆಸುವ ಅಗತ್ಯ ಹೆಚ್ಚಾಗಿದೆ. ಮಕ್ಕಳ ಮನೋವಿಕಾಸಕ್ಕೆ ಪೂರಕವಾದ ಪದ್ಯಗಳನ್ನು ಬಾಲ್ಯದಲ್ಲಿಯೇ ಕೇಳಿಸುವ ಅವಕಾಶ ಸೃಷ್ಟಿಸಬೇಕು ಎಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ಕವಿಗೋಷ್ಠಿಯ ಸರ್ವಾಧ್ಯಕ್ಷ ತಯ್ಯಬಲಿ ಹೊಂಬಳ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹಾಗೂ ಎಂ.ಎಸ್. ಹುಲ್ಲೂರ ಉಪಸ್ಥಿತರಿದ್ದರು.

ಬಾಲ ಕವಿಗಳಾದ ಸಾಕ್ಷಿ ದೇವರಡ್ಡಿ, ಅದಿತಿ ಚಂದ್ರಕಾಂತ ಇಟಗಿ, ತನುಶ್ರೀ ಬಡಿ, ಪ್ರೇರಣಾ ನಾಯನೇಗಲಿ, ಅಕ್ಷಯಕುಮಾರ ಶಿವಸಿಂಪಿಗೇರ, ಪುಟ್ಟರಾಜ ವಸ್ತ್ರದ ಹಾಗೂ ಶ್ರೀನಿಧಿ ಶಿಳ್ಳಿನ ತಮ್ಮ ಕವಿತೆಗಳನ್ನು ವಾಚಿಸಿ ಗಮನ ಸೆಳೆದರು.

> “ಡಿಜಿಟಲ್ ವ್ಯಸನದ ಕಾಲಘಟ್ಟದಲ್ಲಿ ಮಕ್ಕಳಲ್ಲಿ ಸಾಹಿತ್ಯದ ಒಲವು ಬೆಳೆಸುವುದು ಅನಿವಾರ್ಯ. ಮಕ್ಕಳ ಮನೋವಿಕಾಸಕ್ಕೆ ಪೂರಕವಾದ ಕವಿತೆಗಳು ಬಾಲ್ಯದಲ್ಲಿಯೇ ಪರಿಚಯವಾಗಬೇಕು.”
> – ನೀ. ಶ್ರೀಶೈಲ, ಸಾಹಿತಿ

ಅನುಸೂಯಾ ಭಜಂತ್ರಿ ಕಾರ್ಯಕ್ರಮ ನಿರೂಪಿಸಿದರು. ಸತೀಶ ಚನ್ನಪ್ಪಗೌಡರ ಸ್ವಾಗತಿಸಿದರು. ಡಿ.ಎಸ್. ಬಾಪೂರಿ ವಂದಿಸಿದರು.

## "ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ"



**▶▶ ಮೊದಲನೇ ಪುಟದಿಂದ**

ಉಳಿದ 16 ಮಂದಿಯಲ್ಲಿ ಬಹುತೇಕರು ಗುಣಮುಖರಾಗಿದ್ದು, ಇಬ್ಬರಿಗೆ ಹೆಚ್ಚಿನ ಆರೈಕೆ ಅಗತ್ಯವಿದೆ ಎಂದು ಸಚಿವರು ಹೇಳಿದರು. ಸುಮಾರು 11 ಜನರನ್ನು ಶೀಘ್ರದಲ್ಲೇ ಆಸ್ಪತ್ರೆಯಿಂದ ಬಿಡುಗಡೆ ಮಾಡುವ ಸಾಧ್ಯತೆ ಇದ್ದು, ಉಳಿದವರು ಮುಂದಿನ ಎರಡು-ಮೂರು ದಿನಗಳಲ್ಲಿ ಮನೆಗೆ ಮರಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಎಸ್.ಎನ್. ಬಳ್ಳಾರಿ, ಸಿದ್ದು ಪಾಟೀಲ, ಪ್ರಭು ಬುರಬುರೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಡಿವೈಎಸ್ಪಿ ಮುರ್ತುಜಾ ಖಾದ್ರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಮುಖ್ಯಮಂತ್ರಿಗಳಿಂದ ಚಿಕಿತ್ಸಾ ವೆಚ್ಚ ಮಂಜೂರು

ಘಟನೆಯ ಕುರಿತು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಮಾಹಿತಿ ನೀಡಲಾಗಿದ್ದು, ಗಾಯಾಳುಗಳ ಚಿಕಿತ್ಸೆಗೆ ಗರಿಷ್ಠ ₹50 ಸಾವಿರವರೆಗೆ ನೆರವು ನೀಡಲು ಸರ್ಕಾರ ಆದೇಶಿಸಿದೆ ಎಂದು ಸಚಿವರು ಹೇಳಿದರು.

ಚಿಕಿತ್ಸಾ ವೆಚ್ಚ ಹೆಚ್ಚಾದಲ್ಲಿ ಇನ್ನಷ್ಟು ನೆರವು ನೀಡುವ ಕುರಿತು ಸಹ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆದಿದೆ ಎಂದು ತಿಳಿಸಿದರು.

### ಎಸ್‌ಎಸ್‌ಎಲ್‌ಸಿ-ಪಿಯುಸಿ ಮೇಧಾವಿಗಳಿಗೆ ಪ್ರತಿಭಾ ಪುರಸ್ಕಾರ

# ನಿರಂತರ ಸಾಧನೆಯಿಂದಲೇ ಜೀವನದಲ್ಲಿ ಯಶಸ್ಸು

**■ ವಿಜಯಸಾಕ್ಷಿ ಸುದ್ದಿ, ಗದಗ**

ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸುವುದೇ ಜೀವನದ ಅಂತಿಮ ಸಾಧನೆ ಅಲ್ಲ. ಜೀವನದ ಪ್ರತಿಯೊಂದು ಹಂತದಲ್ಲೂ ನಿರಂತರವಾಗಿ ಕಲಿಯುತ್ತಾ ಸಾಧನೆ ಮಾಡುತ್ತಾ ಮುಂದೆ ಸಾಗಿದಾಗ ಮಾತ್ರ ಉನ್ನತ ಮಟ್ಟಕ್ಕೆ ಏರಲು ಸಾಧ್ಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳ ಸಂಘಟನೆ ವತಿಯಿಂದ ಗದುಗಿನ ಕೆಎಲ್‌ಇ ಸಂಸ್ಥೆಯ ಜೆ.ಟಿ. ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಎಪ್ರಿಲ್-2026ರ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು.

ಮೇಧಾವಿ ವಿದ್ಯಾರ್ಥಿಗಳನ್ನು ಸನ್ಮಾನಿಸಿ ನಗದು ಬಹುಮಾನ ವಿತರಿಸಿದ ಅವರು, ಜೀವನದಲ್ಲಿ ಕಲಿಕೆಯ ಪ್ರಕ್ರಿಯೆ ನಿರಂತರವಾಗಿದ್ದು, ಅದಕ್ಕೆ ಅಂತ್ಯ ಎಂಬುದಿಲ್ಲ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಕಳೆದ ಒಂದು ದಶಕದಿಂದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವ



ಕಾರ್ಯ ಶ್ಲಾಘನೀಯವಾಗಿದೆ ಎಂದರು.

ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಂಡಿರುವ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರನ್ನು ಅಭಿನಂದಿಸಿದರು.

ಕಾರ್ಯಕ್ರಮದ ಸಂಘಟನೆಯ ನೇತೃತ್ವ ವಹಿಸಿದ್ದ ಎಸ್.ವಿ. ಸಂಕನೂರ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಸಾಧಿಸಲು ಸ್ಪಷ್ಟ ಗುರಿ ಹೊಂದಿರಬೇಕು. ಅದಕ್ಕೆ ತಕ್ಕಂತೆ ಸತತ ಪರಿಶ್ರಮ ಮತ್ತು ಶಿಸ್ತು ಅಗತ್ಯ ಎಂದು ಹೇಳಿದರು.

ಬಿಜೆಪಿ ಯುವ ಮುಖಂಡ ಉಮೇಶಗೌಡ ಸಿ. ಪಾಟೀಲ ಮಾತನಾಡಿ, ಪ್ರತಿಭಾ ಪುರಸ್ಕಾರದ ಜೊತೆಗೆ ವ್ಯಕ್ತಿತ್ವ ವಿಕಸನ ಉಪನ್ಯಾಸ ಆಯೋಜಿಸಿರುವುದು

> "ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸುವುದಷ್ಟೇ ಸಾಧನೆ ಅಲ್ಲ. ಜೀವನದ ಪ್ರತಿಯೊಂದು ಹಂತದಲ್ಲೂ ನಿರಂತರ ಕಲಿಕೆ ಮತ್ತು ಸಾಧನೆಯ ಮೂಲಕವೇ ಎತ್ತರಕ್ಕೆ ಬೆಳೆಯಲು ಸಾಧ್ಯ."
> **- ಬಸವರಾಜ ಬೊಮ್ಮಾಯಿ**
> ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರು

ವಿಶೇಷವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜೆ.ಟಿ. ಪದವಿ ಕಾಲೇಜಿನ ಪ್ರಾಚಾರ್ಯ ಪಿ.ಜಿ. ಪಾಟೀಲ ವಹಿಸಿದ್ದರು. ವೇದಿಕೆಯಲ್ಲಿ ಎಂ.ಕೆ. ಲಮಾಣಿ, ಎ.ಎಸ್. ಪಾಟೀಲ, ವೈ.ಎಸ್. ಪಾಟೀಲ, ಎಸ್.ಬಿ. ಮಸನಾಯಕ, ಆರ್.ಎಸ್. ಬುರಡಿ, ಜಿ.ಎಂ. ಮುಂದಿನಮನಿ, ಆರ್.ವಿ. ಶೆಟ್ಟೆಣ್ಣವರ, ವಿ.ವಿ. ನಡವಿನಮನಿ, ಎಂ.ಎಚ್. ಕಂಬಳಿ, ಅರ್ಜುನ ಕಾಂಬೋಜಿ, ಜಿ.ಎಸ್. ಸಿರ್ಸಿ, ಎಸ್.ಬಿ. ಹಾವೇರಿ, ಶ್ರೀಶೈಲ ಬೀರಕಬ್ಬಿ, ರಾಜು ಕುರಡಗಿ, ಸುರೇಶ ಮರಳಪ್ಪನವರ, ಎಂ.ಎಸ್. ಕರಿಗೌಡ್ರ, ಕುನಾಲ ಅಬ್ಬಿಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಶೋಕ ಅಂಗಡಿ ಸ್ವಾಗತಿಸಿದರು. ಬಿ.ಎಫ್. ಪೂಜಾರ ವಂದಿಸಿದರು. ಡಿ.ಎಸ್. ನಾಯಕ ಕಾರ್ಯಕ್ರಮ ನಿರೂಪಿಸಿದರು.

### ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ

ಕಾರ್ಯಕ್ರಮದಲ್ಲಿ ಪದವಿಪೂರ್ವ ವಿಭಾಗದ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ 12 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ವಿಭಾಗದಲ್ಲಿ ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಹೆಚ್ಚು ಅಂಕ ಪಡೆದ 22 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಎನ್‌ಸಿಸಿ ವಿಭಾಗದ ಮೂವರು ವಿದ್ಯಾರ್ಥಿಗಳು ಹಾಗೂ ಮಾರ್ಗದರ್ಶಕರಾದ ಮೇಜರ್ ಬಿ.ಎಸ್. ರಾಠೋಡ ಅವರನ್ನು ಸಹ ಸನ್ಮಾನಿಸಲಾಯಿತು

# ಅಸುರಕ್ಷಿತ ಪ್ರದೇಶದಲ್ಲಿ ಮಹಿಳಾ ಕಾಲೇಜು ಬೇಡ

**▶▶ ಮೊದಲನೇ ಪುಟದಿಂದ**

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ವೇದಿಕೆ ಅಧ್ಯಕ್ಷ ಮಹ್ಮದ್ ಯೂಸುಫ್ ನಮಾಜಿ, ಕಾರವಾರ-ಬಳ್ಳಾರಿ ರಸ್ತೆಯ ಖಬರಸ್ತಾನ ಜಾಗೆಯ ಕಟ್ಟಡದಲ್ಲಿ ಮಹಿಳಾ ಕಾಲೇಜು ಆರಂಭಿಸಲು ಅಧಿಕಾರಿಗಳು ಮುಂದಾಗಿರುವುದು ಸರಿಯಲ್ಲ ಎಂದು ಹೇಳಿದರು.

ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ಯಾವುದೇ ಕಾರಣಕ್ಕೂ ಅಸುರಕ್ಷಿತ ವಾತಾವರಣ ಇರುವ ಪ್ರದೇಶದಲ್ಲಿ ಕಾಲೇಜು ಆರಂಭಿಸಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು.

ನಗರದ ಮಧ್ಯಭಾಗದಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯಾವುದಾದರೂ ವಸತಿ ಶಾಲೆಯನ್ನು ಸ್ಥಳಾಂತರಿಸಿ ಆ ಕಟ್ಟಡದಲ್ಲಿ ಮಹಿಳಾ ಕಾಲೇಜು ಆರಂಭಿಸಬೇಕು ಎಂದು ಆಗ್ರಹಿಸಿದರು.

ವೇದಿಕೆ ಕಾರ್ಯದರ್ಶಿ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, ಮುಸ್ಲಿಂ ಸಮುದಾಯ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದ್ದು, ಮಹಿಳಾ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಅಗತ್ಯವಾಗಿದೆ ಎಂದರು.

ಸಾವಿರಾರು ಬಡ ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ಶಿಕ್ಷಣದ ಅವಕಾಶ ಕಲ್ಪಿಸುವ ಉದ್ದೇಶದಿಂದ ಮಹಿಳಾ ಕಾಲೇಜು ಆರಂಭಿಸಲಾಗುತ್ತಿದ್ದು, ವಿದ್ಯಾರ್ಥಿನಿಯರ ಸುರಕ್ಷತೆ ದೃಷ್ಟಿಯಿಂದ ಕಾಲೇಜು ನಗರ ಮಧ್ಯಭಾಗದಲ್ಲಿರಬೇಕು ಎಂದು ಒತ್ತಾಯಿಸಿದರು.

ಖಾಸಗಿ ಸಂಸ್ಥೆಗಳ ಕಟ್ಟಡಗಳನ್ನು ಬಾಡಿಗೆ ಪಡೆದು ಲಕ್ಷಾಂತರ ರೂಪಾಯಿ ವೆಚ್ಚ ಮಾಡುವ ಬದಲು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಹಾಸ್ಟೆಲ್ ಕಟ್ಟಡಗಳಲ್ಲಿ ಕಾಲೇಜು ಆರಂಭಿಸಬೇಕು ಎಂದು ಹೇಳಿದರು.

ಅಂಜುಮನ್ ಇಸ್ಲಾಂ ಸಂಸ್ಥೆಯ ನಿರ್ದೇಶಕ ಬಾಷಾಸಾಬ ಮಲ್ಲಸಮುದ್ರ ಮಾತನಾಡಿ, ನಗರದ ವಿವಿಧ ಜಮಾತ್ ಮುಖಂಡರು ಹಾಗೂ ಅಲ್ಪಸಂಖ್ಯಾತ ಸಂಘಟನೆಗಳೊಂದಿಗೆ ಸಮಾಲೋಚನೆ ನಡೆಸಿ ವಿದ್ಯಾರ್ಥಿನಿಯರಿಗೆ ಸುರಕ್ಷಿತವಾದ ಕಟ್ಟಡದಲ್ಲಿಯೇ ಕಾಲೇಜು ಆರಂಭಿಸಬೇಕು ಎಂದು ಒತ್ತಾಯಿಸಿದರು.

ಒಂದು ವೇಳೆ ಅಧಿಕಾರಿಗಳು ಖಾಸಗಿ ಕಟ್ಟಡಗಳಲ್ಲಿ ಅಥವಾ ಅಸುರಕ್ಷಿತ ಪ್ರದೇಶದಲ್ಲಿ ಕಾಲೇಜು ಆರಂಭಿಸಲು ಮುಂದಾದರೆ, ಸಾವಿರಾರು ಜನರೊಂದಿಗೆ ಬೃಹತ್ ಪ್ರತಿಭಟನೆ ನಡೆಸುವುದಾಗಿ ಮನವಿ ಮೂಲಕ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಬಾಬಾಜಾನ ಬಳಗಾನೂರ, ಎಂ.ಎನ್. ಮಾಳೆಕೊಪ್ಪ, ಅನ್ವರ್ ಶಿರಹಟ್ಟಿ, ರಫೀಕ್ ಜಮಾಲಖಾನವರ, ಯೂಸುಫ್‌ಸಾಬ ಕೊಟ್ಟೂರ, ಮುನ್ನಾ ಶೇಖ್, ಅಬ್ದುಲರಜಾಕ್ ಶಿರಹಟ್ಟಿ, ಎಂ.ಬಿ. ನದಾಫ್, ಸುಲೇಮಾನ ಮಾಳೆಕೊಪ್ಪ, ಮೌಲಾಸಾಬ ಗಚ್ಚಿ, ಅಬ್ಬು ಅಣ್ಣಿಗೇರಿ, ಆಶೀಫ್ ದಂಡಿನ, ಮುಜಫರ್ ಮುಲ್ಲಾ, ಬಾಬಾಜಾನ ಕಿತ್ತೂರ, ಆರೀಫ್ ಹುನಗುಂದ, ಉಸ್ಮಾನ್ ಮಾಳೆಕೊಪ್ಪ, ಜಂದಿಸಾಬ ಥಾಲಾಯತ, ಖಾಜಾಸಾಬ ಬಳ್ಳಾರಿ ಸೇರಿದಂತೆ ನೂರಾರು ಪದಾಧಿಕಾರಿಗಳು ಭಾಗವಹಿಸಿದ್ದರು.

### ಮುಳಗುಂದದಲ್ಲಿ ಜಯಂತ್ಯುತ್ಸವ ಹಾಗೂ ತಾಯಂದಿರ ದಿನಾಚರಣೆಯಲ್ಲಿ ಬಳಿಗೇರ

# ಸ್ತ್ರೀ ಕುಲಕ್ಕೆ ಹೇಮರೆಡ್ಡಿ ಮಲ್ಲಮ್ಮ ಆದರ್ಶ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**



ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಅವರ ಆದರ್ಶ, ಸಮಾಜಸೇವೆ ಹಾಗೂ ದಿಟ್ಟತನ ಇಂದಿನ ಮಹಿಳೆಯರಿಗೆ ಮಾದರಿಯಾಗಿದೆ ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಪಟ್ಟಣದ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ ಹಾಗೂ ಹೇಮರೆಡ್ಡಿ ಮಲ್ಲಮ್ಮ ಸೇವಾ ಸಂಘದ ಸಂಯುಕ್ತಾಶ್ರಯದಲ್ಲಿ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಹಾಗೂ ಅಂತಾರಾಷ್ಟ್ರೀಯ ತಾಯಂದಿರ ದಿನಾಚರಣೆ ಅಂಗವಾಗಿ ಅವ್ವಾ ಸೇವಾ ಪ್ರತಿಷ್ಠಾನದ ಸಹಭಾಗಿತ್ವದಲ್ಲಿ ಆಯೋಜಿಸಿದ್ದ "ತಾಯಿ ದೇವರು" ಕುರಿತ ವಸಂತೋತ್ಸವ ಕವನ ವಾಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಕುಟುಂಬದ ಕಿರುಕುಳ, ಸಂಕಷ್ಟಗಳ ನಡುವೆಯೂ ಸಹನೆ, ತ್ಯಾಗ, ಮಮತೆ ಮತ್ತು ಶಿವಭಕ್ತಿಯ ಮೂಲಕ ದೈವ ಸಾಕ್ಷಾತ್ಕಾರದತ್ತ ಸಾಗಿದ ಮಲ್ಲಮ್ಮ ಅವರು ಎಲ್ಲ ಮಹಿಳೆಯರಿಗೂ ಆದರ್ಶಪ್ರಾಯರಾಗಿದ್ದಾರೆ ಎಂದರು.

ದಿವ್ಯ ಸಾನಿಧ್ಯ ವಹಿಸಿದ್ದ ಮಲ್ಲಿಕಾರ್ಜುನ ಮಹಾಸ್ವಾಮೀಜಿ ಮಾತನಾಡಿ, ಕುಟುಂಬದ ಎಲ್ಲ ಕಷ್ಟಗಳನ್ನು ಸಹಿಸಿಕೊಂಡು ಅಂತರಂಗ-ಬಹಿರಂಗ ಶುದ್ಧತೆಯಿಂದ ಮಹಾ ಶಿವಶರಣೆಯಾಗಿ ಬದುಕಿದ ಮಲ್ಲಮ್ಮ ಅವರ ಜೀವನ ಇಂದಿನ ಮಹಿಳೆಯರಿಗೆ ದಾರಿದೀಪವಾಗಿದೆ ಎಂದು ಹೇಳಿದರು.

ವ್ಂಹಿಳ್ಂಂ್ಂರ್ಂ ಯಾವುದೇ ಸಂದರ್ಭದಲ್ಲೂ ಎದೆಗುಂದದೆ ಧೈರ್ಯದಿಂದ ಮುಂದೆ ಸಾಗಿದಾಗ ಬದುಕು ಸುಂದರವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಂ.ಡಿ. ಬಟ್ಟೂರ ಮಾತನಾಡಿ, ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ಕಾಲಕಾಲಕ್ಕೆ ಶರಣರು,

> "ಸಹನೆ, ತ್ಯಾಗ ಮತ್ತು ಶಿವಭಕ್ತಿಯ ಮೂಲಕ ಜೀವನದಲ್ಲಿ ಎದುರಾದ ಸಂಕಷ್ಟಗಳನ್ನು ಗೆದ್ದು ಸಮಾಜಕ್ಕೆ ಆದರ್ಶವಾಗಿರುವ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಅವರ ಬದುಕು ಪ್ರತಿಯೊಬ್ಬ ಮಹಿಳೆಗೆ ಪ್ರೇರಣೆಯಾಗಿದೆ."
> - ಕೆ.ಎ. ಬಳಿಗೇರ, ಅಧ್ಯಕ್ಷರು,
> ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು

ಸಂತರು ಮತ್ತು ಶರಣೆಯರ ಜಯಂತಿಗಳನ್ನು ಆಚರಿಸುವ ಮೂಲಕ ನಾಡಿನ ಸಂಸ್ಕೃತಿ ಉಳಿಸಿ ಬೆಳೆಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ರಚಿಸಿರುವ "ಸ್ತ್ರೀ ಸಂವೇದನೆಯ ಅಸ್ಮಿತೆ" ಕೃತಿಯನ್ನು ಮಲ್ಲಿಕಾರ್ಜುನ ಮಹಾಸ್ವಾಮೀಜಿ ಲೋಕಾರ್ಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ವಿಜಯ ನೀಲಗುಂದ, ಡಾ. ಎಸ್.ಸಿ. ಚವಡಿ, ಬಿ.ವಿ. ಸುಂಕಾಪೂರ, ಮಂಜುನಾಥ ಮಟ್ಟಿ, ರಾಜೇಶ್ವರಿ ಬಡ್ನಿ, ಮಲ್ಲಮ್ಮ ಬಟ್ಟೂರ, ಬಸವರಾಜ ಬಡ್ನಿ, ಕೆ.ಎಲ್. ಕರಿಗೌಡ್ರ, ರಾಮಣ್ಣ ಕಮಾಜಿ, ಶಂಕ್ರಪ್ಪ ಗೋರವರ, ಪ್ರಕಾಶ ಮದ್ದಿನ, ಚಂದ್ರು ಬಟ್ಟೂರ, ಲಿಂಗರಾಜ ಬಟ್ಟೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ನರೇಗಲ್ಲದಲ್ಲಿ ಡಾ. ಜಿ.ಕೆ. ಕಾಳೆ ಭೂಮಿಪೂಜೆ- ಕಲ್ಯಾಣ ಮಂಟಪ ನಿರ್ಮಾಣಕ್ಕೂ ಯೋಜನೆ!

# ಶ್ರೀ ದತ್ತಾತ್ರೇಯ ದೇವಸ್ಥಾನ ಜೀರ್ಣೋದ್ಧಾರಕ್ಕೆ ಚಾಲನೆ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನೂರು ವರ್ಷಗಳ ಇತಿಹಾಸ ಹೊಂದಿರುವ ಹಾಗೂ "ಎರಡನೇ ಗಾಣಗಾಪುರ"ವೆಂದೇ ಭಕ್ತರಿಂದ ಕರೆಯಿಸಿಕೊಳ್ಳುವ ನರೇಗಲ್ಲದ ಶ್ರೀ ದತ್ತಾತ್ರೇಯ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಸೋಮವಾರ ಬ್ರಹ್ಮ ಸಮಾಜದ ಹಿರಿಯರಾದ ಡಾ. ಜಿ.ಕೆ. ಕಾಳೆ ಭೂಮಿಪೂಜೆ ನೆರವೇರಿಸುವ ಮೂಲಕ ವಿಧ್ಯುಕ್ತ ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ನರೇಗಲ್ಲ ಪಟ್ಟಣದಲ್ಲಿ ನೆಲೆಸಿರುವ ಶ್ರೀ ಗುರು ದತ್ತಾತ್ರೇಯ ಸ್ವಾಮಿ ಭಕ್ತರ ಕಾಮನೆಗಳನ್ನು ನೆರವೇರಿಸುವ ಭಕ್ತವತ್ಸಲನಾಗಿದ್ದು, ಅವನನ್ನು ನಂಬಿ ಕೈಗೊಂಡ ಕಾರ್ಯಗಳು ಯಶಸ್ವಿಯಾಗಿರುವುದನ್ನು ಅನೇಕ ಬಾರಿ ಕಂಡಿದ್ದೇವೆ ಎಂದು ಹೇಳಿದರು.

ಸುಮಾರು ನಾಲ್ಕು ದಶಕಗಳ ಹಿಂದೆ ಭಕ್ತರ ಸಹಕಾರದಿಂದ ದೇವಸ್ಥಾನವನ್ನು ನೂತನವಾಗಿ ನಿರ್ಮಿಸಲಾಗಿತ್ತು. ಈಗ ಮೇಲ್ಛಾವಣಿ ಶಿಥಿಲಾವಸ್ಥೆ ತಲುಪಿರುವುದರಿಂದ ಜೀರ್ಣೋದ್ಧಾರ ಮಾಡುವುದು ಅನಿವಾರ್ಯವಾಗಿದೆ ಎಂದು ತಿಳಿಸಿದರು.

> "ಶ್ರೀ ಗುರು ದತ್ತಾತ್ರೇಯನ ಆಶೀರ್ವಾದದೊಂದಿಗೆ ಜೀರ್ಣೋದ್ಧಾರ ಕಾರ್ಯ ಆರಂಭಿಸಲಾಗಿದೆ. ಭಕ್ತರ ಸಹಕಾರದಿಂದ ಈ ಮಹತ್ಕಾರ್ಯ ಯಶಸ್ವಿಯಾಗಲಿದೆ."
> **- ಡಾ. ನಾಗರಾಜ ಗ್ರಾಮಪುರೋಹಿತ**

ದೇವಸ್ಥಾನದ ಜೊತೆಗೆ ಶ್ರೀ ದತ್ತಾತ್ರೇಯ ಕಲ್ಯಾಣ ಮಂಟಪ ನಿರ್ಮಾಣಕ್ಕೂ ಯೋಜನೆ ರೂಪಿಸಲಾಗಿದ್ದು, ಇದಕ್ಕೆ ಅಂದಾಜು ₹1.50 ಕೋಟಿ ವೆಚ್ಚವಾಗಲಿದೆ ಎಂದು ಹೇಳಿದರು.

ಶ್ರೀ ದತ್ತ ಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಮಾತನಾಡಿ, "ಶ್ರೀ ಗುರು ದತ್ತಾತ್ರೇಯನ ಜೋಳಿಗೆಗೆ ಎಂದಿಗೂ ಬರವಿಲ್ಲ. ಭಕ್ತರ ಸಹಕಾರ ಮತ್ತು ಶ್ರೀ ದತ್ತನ ಆಶೀರ್ವಾದದೊಂದಿಗೆ ಈ ಮಹತ್ಕಾರ್ಯ ಆರಂಭಿಸಲಾಗಿದೆ" ಎಂದರು.

ಭಕ್ತರು ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಉದಾರ ಮನಸ್ಸಿನಿಂದ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಭೂಮಿಪೂಜಾ ವಿಧಿಗಳನ್ನು ದೇವಸ್ಥಾನದ ಅರ್ಚಕರಾದ ಶ್ರೀವಲ್ಲಭಭಟ್ಟ ಸದರಜೋಷಿ ಹಾಗೂ ಆದರ್ಶ ಕುಲಕರ್ಣಿ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಎ.ಜಿ. ಕುಲಕರ್ಣಿ, ಕಾರ್ಯದರ್ಶಿ ರಘುನಾಥ ಕೊಂಡಿ, ಅರುಣ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ, ಶ್ರೀ ದತ್ತ ಭಕ್ತ ಮಂಡಳಿಯ ಸದಸ್ಯರು ಹಾಗೂ ಸುಮಂಗಲೆಯರು ಉಪಸ್ಥಿತರಿದ್ದರು.

### ಡಂಬಳದಲ್ಲಿ 604ನೇ ಜಯಂತ್ಯುತ್ಸವ- ಧರ್ಮಸಭೆ

# ಹೇಮರೆಡ್ಡಿ ಮಲ್ಲಮ್ಮಳ ತ್ಯಾಗ-ತಾಳ್ಮೆಯ ಬದುಕು ಇಂದಿಗೂ ಆದರ್ಶ

**■ ವಿಜಯಸಾಕ್ಷಿ ಸುದ್ದಿ, ಡಂಬಳ**




ಮಹಾಸಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರು ಒಂದು ಜಾತಿಗೆ ಸೀಮಿತವಾದವರಲ್ಲ. ತ್ಯಾಗ, ನ್ಯಾಯ, ಸಹನೆ ಹಾಗೂ ಕಾಯಕದ ಮೂಲಕ ಅವರು ಹಾಕಿಕೊಟ್ಟ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಮಣಕವಾಡದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.

ಡಂಬಳ ಗ್ರಾಮದ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದ ಆವರಣದಲ್ಲಿ ಹೇಮರೆಡ್ಡಿ ಮಲ್ಲಮ್ಮ ಸೇವಾ ಸಮಿತಿ ಹಾಗೂ ಕಪ್ಪತ್ತಮಲ್ಲೇಶ್ವರ ಟ್ರಸ್ಟ್ ಕಮಿಟಿ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮಹಾಸಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ 604ನೇ ಜಯಂತ್ಯುತ್ಸವದ ಧರ್ಮಸಭೆಯಲ್ಲಿ ಅವರು ಆಶೀರ್ವಚನ ನೀಡಿದರು.

ಸಂಸಾರದ ಜಂಜಾಟಗಳ ನಡುವೆಯೂ ಭಕ್ತಿ ಮತ್ತು ಸಹನೆಯ ಮೂಲಕ ಆಧ್ಯಾತ್ಮದ ಉತ್ತುಂಗಕ್ಕೇರಿದ ಮಲ್ಲಮ್ಮನವರ ಜೀವನ ಇಂದಿನ ಸಮಾಜಕ್ಕೆ ಹಾಗೂ ಮಹಿಳೆಯರಿಗೆ ಪ್ರೇರಣೆಯಾಗಿದೆ ಎಂದು ಹೇಳಿದರು.

ಇಂದಿನ ತಾಂತ್ರಿಕ ಯುಗದಲ್ಲಿ ಮನುಷ್ಯ ಸಣ್ಣಪುಟ್ಟ ಕಷ್ಟಗಳಿಗೂ ಧೃತಿಗೆಡುವ ಸಂದರ್ಭದಲ್ಲಿ ಮಲ್ಲಮ್ಮನವರ ಬದುಕು ಸ್ಥಿತಪ್ರಜ್ಞೆ ಮತ್ತು ಸಹನೆಯ ಪಾಠ ಕಲಿಸುತ್ತದೆ ಎಂದು ಅಭಿಪ್ರಾಯಪಟ್ಟರು. ಸ್ತ್ರೀ ಶಕ್ತಿಯ ಸಂಕೇತವಾಗಿದ್ದ ಅವರು ಸಂಸಾರದಲ್ಲಿಯೇ ಇದ್ದುಕೊಂಡು ಆಧ್ಯಾತ್ಮಿಕ ಶಿಖರವನ್ನು ತಲುಪಿದ ಮಹಾನ್ ಮಾತೆ ಎಂದು ಕೊಂಡಾಡಿದರು.

ಹರ್ಲಾಪುರದ ಡಾ. ಅಭಿನವ ಕೊಟ್ಟುರೇಶ್ವರ ಮಹಾಸ್ವಾಮಿಗಳು ಮಾತನಾಡಿ, ಧರ್ಮ, ಸತ್ಯ, ಅಹಿಂಸೆ ಹಾಗೂ ನಿಸ್ವಾರ್ಥ ಬದುಕಿನ ಮೂಲಕ ಹೇಮರೆಡ್ಡಿ ಮಲ್ಲಮ್ಮ ಅವರು ಆದರ್ಶ ಜೀವನ ನಡೆಸಿದ್ದಾರೆ ಎಂದರು.

ಮಲ್ಲಮ್ಮ ಯಾವುದೇ ವಚನಗಳನ್ನು ರಚಿಸದಿದ್ದರೂ, ದಾರ್ಶನಿಕರ ವಚನಗಳಂತೆ ಬದುಕಿದ ಆದರ್ಶ ನಾರಿಯಾಗಿದ್ದರು. ಅವರ ಬದುಕಿನ ಸವಾಲುಗಳೇ ಜೀವನದರ್ಶನವಾಗಿವೆ ಎಂದು ಹೇಳಿದರು.

> "ಹೇಮರೆಡ್ಡಿ ಮಲ್ಲಮ್ಮ ತಾಯಿ ತೋರಿದ ಸಹನೆ, ತ್ಯಾಗ ಮತ್ತು ಭಕ್ತಿಯ ಹಾದಿಯಲ್ಲಿ ಸಮಾಜ ಸಾಗಬೇಕು. ಎಲ್ಲರನ್ನು ಒಗ್ಗೂಡಿಸಿಕೊಂಡು ಹೋಗುವ ಗುಣವನ್ನು ಮಲ್ಲಮ್ಮನವರಿಂದ ಕಲಿಯಬೇಕು."
> **- ಅಭಿನವ ಮೃತ್ಯುಂಜಯ** ಮಹಾಸ್ವಾಮಿಗಳು

ತಾಳ್ಮೆಯಿಂದ ಬದುಕಿದವರು ಸದಾ ಜನರ ಮನಸ್ಸಿನಲ್ಲಿ ಉಳಿಯುತ್ತಾರೆ. ಆ ಹಿನ್ನೆಲೆಯಲ್ಲಿ ಹೇಮರೆಡ್ಡಿ ಮಲ್ಲಮ್ಮ ಅವರ ಸಹನಾಗುಣ 604 ವರ್ಷಗಳ ಬಳಿಕವೂ ಪ್ರಸ್ತುತವಾಗಿದೆ ಎಂದು ಅಭಿಪ್ರಾಯಪಟ್ಟರು.

ಜೆ.ಟಿ. ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ವೇ.ಮೂ. ರಾಜಶೇಖರಯ್ಯ ಹಿರೇಮಠ, ಅಧ್ಯಕ್ಷ ಮಲ್ಲಿಕಾರ್ಜುನ ಪ್ಯಾಟಿ, ಉಪಾಧ್ಯಕ್ಷ ಬಸವರಾಜ ಶಿರೋಳ, ಕಾರ್ಯದರ್ಶಿ ಶಶಿಕುಮಾರ ಸಣ್ಣಪ್ಯಾಟಿ, ಹಿರಿಯರಾದ ವಿ.ಟಿ. ಮೇಟಿ, ಮಹೇಶ ಗಡಗಿ, ಮಲ್ಲಣ್ಣ ಯರಾಶಿ, ಸಿ.ಟಿ. ಪ್ಯಾಟಿ ಸೇರಿದಂತೆ ಅನೇಕ ಮುಖಂಡರು, ಮಹಿಳೆಯರು ಹಾಗೂ ಯುವಕರು ಭಾಗವಹಿಸಿದ್ದರು.

ಮಂಜುನಾಥ ಬಿಸನಳ್ಳಿ ಕಾರ್ಯಕ್ರಮ ನಿರೂಪಿಸಿದರು.

# ಎಂಟ್ರಿ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೊಮಾ (ಡಿ.ಎಚ್.ಟಿ.ಟಿ.) ಹಾಗೂ ಲ್ಯಾಟರಲ್ ಎಂಟ್ರಿ ದ್ವಿತೀಯ ವರ್ಷದ ಡಿಪ್ಲೊಮಾ ಕೋರ್ಸುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನ ಕೋರ್ಸಿನಡಿ ಒಟ್ಟು 39 ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ವ್ಯಾಸಂಗದ ಅವಧಿಯಲ್ಲಿ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500 ಶಿಷ್ಯವೇತನ ನೀಡಲಾಗುವುದು. ಪುರುಷ ಅಭ್ಯರ್ಥಿಗಳಿಗೆ ಹಣ ಪಾವತಿ ಆಧಾರದ ಮೇಲೆ ವಸತಿ ನಿಲಯದ ಸೌಲಭ್ಯವೂ ಲಭ್ಯವಿರುತ್ತದೆ.

ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲಿಷ್ ವಿಷಯದಲ್ಲಿ ಉತ್ತೀರ್ಣರಾಗಿರಬೇಕು. 2026ರ ಜುಲೈ 1ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15ರಿಂದ 23 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15ರಿಂದ 25 ವರ್ಷದೊಳಗಿರಬೇಕು.

ಅರ್ಹತಾ ಪರೀಕ್ಷೆಯಲ್ಲಿ ಪಡೆದ ಒಟ್ಟು ಅಂಕಗಳ ಆಧಾರದ ಮೇಲೆ ಮೆರಿಟ್ ಪಟ್ಟಿ ಸಿದ್ಧಪಡಿಸಿ, ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಪ್ರವೇಶ ಕೌನ್ಸಿಲಿಂಗ್‌ಗೆ ಕರೆಯಲಾಗುವುದು.

ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ಅವರನ್ನು ಸಂಪರ್ಕಿಸಬಹುದು. ಮೊಬೈಲ್ ಸಂಖ್ಯೆ: 9916143619 / 9845906227 ಹಾಗೂ ಕಚೇರಿ ದೂರವಾಣಿ ಸಂಖ್ಯೆ: 08372-259664 / 238649 ಗೆ ಸಂಪರ್ಕಿಸಬಹುದಾಗಿದೆ.

ಅರ್ಜಿಗಳನ್ನು ಆನ್‌ಲೈನ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಮೇ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ - 582102 ಇವರಿಗೆ ಸಲ್ಲಿಸಬೇಕು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ನಿರ್ದೇಶಕರು ಹಾಗೂ ಜವಳಿ ಅಭಿವೃದ್ಧಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 2028ಕ್ಕೆ ಕಮಲ ಅರಳುವುದು ನಿಶ್ಚಿತ

▶▶ ಮೊದಲನೇ ಪುಟದಿಂದ

ಕರ್ನಾಟಕದಲ್ಲಿ ಬಿಜೆಪಿಯ ಬೇರುಗಳು ಗಟ್ಟಿಯಾಗಿದ್ದು, ಪಕ್ಷದ ಸಂಘಟನೆ ಮತ್ತಷ್ಟು ಬಲವರ್ಧನೆಗೊಂಡಿದೆ ಎಂದು ಹೇಳಿದರು.

ಹಿಂದೆ ಬಿ.ಎಸ್. ಯಡಿಯೂರಪ್ಪ ಅವರ ನೇತೃತ್ವದಲ್ಲಿ ಬಿಜೆಪಿ ಸರ್ಕಾರ ರಚನೆ ಮಾಡಿದ್ದು, ಜನರ ಆಶೀರ್ವಾದದಿಂದ ಮತ್ತೊಮ್ಮೆ ಅಧಿಕಾರಕ್ಕೆ ಬರಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಕಾರ್ಯವೈಖರಿಯಿಂದ ಜನರು ಅಸಮಾಧಾನಗೊಂಡಿದ್ದು, ಕಾಂಗ್ರೆಸ್ ಸರ್ಕಾರದ ವಿರುದ್ಧ ಜನರಲ್ಲಿ ಆಕ್ರೋಶ ವ್ಯಕ್ತವಾಗುತ್ತಿದೆ ಎಂದು ಆರೋಪಿಸಿದರು.

2028ರ ಚುನಾವಣೆಯಲ್ಲಿ ಜನರು ಬಿಜೆಪಿಗೆ ಬೆಂಬಲ ನೀಡಿ ಮತ್ತೆ ಅಧಿಕಾರಕ್ಕೆ ತರುತ್ತಾರೆ ಎಂಬ ವಿಶ್ವಾಸವಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ, ಮುಖಂಡರಾದ ಉಮೇಶಗೌಡ ಪಾಟೀಲ, ಶಿವು ಹಿರೇಮನಿಪಾಟೀಲ ಸೇರಿದಂತೆ ಹಲವು ಕಾರ್ಯಕರ್ತರು ಇದ್ದರು.

---

**ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ನಡೆದ ಜಾಗೃತಿ ಕಾರ್ಯಾಗಾರದಲ್ಲಿ ಸಿಇಒ ಭುವನೇಶ ಪಾಟೀಲ**

# “ಹವಾಮಾನ ಬದಲಾವಣೆ ಎದುರಿಸಲು ಸಮನ್ವಯ ಅಗತ್ಯ”

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ವತಿಯಿಂದ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಕುರಿತ ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರವನ್ನು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು, ಕರ್ನಾಟಕ ಸರ್ಕಾರದ ನಿರ್ದೇಶನದಂತೆ ರಾಜ್ಯ ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದ್ದು, 2024ರಲ್ಲಿ ಕೇಂದ್ರ ಅರಣ್ಯ, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ಅನುಮೋದನೆ ಪಡೆದಿದೆ ಎಂದು ತಿಳಿಸಿದರು.



2025–2030ರ ಅವಧಿಗೆ ವಿವಿಧ ಇಲಾಖೆಗಳು ಕಾರ್ಯಕ್ಷಮತೆ ಸೂಚಕಗಳನ್ನು ನಿಗದಿಪಡಿಸಿಕೊಂಡಿದ್ದು, ಅದರ ಅನುಷ್ಠಾನ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಾಮರ್ಥ್ಯ ವೃದ್ಧಿಗಾಗಿ ಈ ತರಬೇತಿ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಡಾ. ರಾಜೇಂದ್ರ ಪೋದಾರ್, ಡಾ. ಪ್ರಕಾಶ್ ಭಟ್, ಹವಾಮಾನ ಬದಲಾವಣೆ ಕೇಂದ್ರದ ಹಿರಿಯ ಸಮಾಲೋಚಕಿ ಡಾ. ಬಿ. ಸರಿತ ಹಾಗೂ ಜಲ ಸಂಪನ್ಮೂಲ ಪರಿಣಿತೆ ಡಾ. ಉಷಾ ಮಾತನಾಡಿದರು.

ವಿವಿಧ 34 ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಣ ಸಂಸ್ಥೆಗಳ ಸದಸ್ಯರು ಹಾಗೂ ಇತರ ಪಾಲುದಾರರು ಭಾಗವಹಿಸಿದ್ದರು.

> “ಹವಾಮಾನ ಬದಲಾವಣೆ ಪರಿಣಾಮಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ಇಲಾಖೆಗಳ ಸಮನ್ವಯ ಮತ್ತು ಜನಜಾಗೃತಿ ಅತ್ಯಂತ ಅಗತ್ಯವಾಗಿದೆ.”
> **– ಭುವನೇಶ ಪಾಟೀಲ,** ಜಿಪಂ ಸಿಇಒ

---

**ವಿವಿಧ ವಾದ್ಯಮೇಳದೊಂದಿಗೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಸಂಭ್ರಮ**

# “ಹೇಮರಡ್ಡಿ ಮಲ್ಲಮ್ಮ ಆದರ್ಶಗಳು ಯುವಜನತೆಗೆ ದಾರಿದೀಪ”

■ ವಿಜಯಸಾಕ್ಷಿ ಸುದ್ದಿ, ಡಂಬಳ

“ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ಆದರ್ಶಗಳು ಇಂದಿನ ಯುವಪೀಳಿಗೆಗೆ ದಾರಿದೀಪವಾಗಿವೆ. ಅವರ ತ್ಯಾಗ, ಭಕ್ತಿ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು” ಎಂದು ಶ್ರೀ ಹೇಮರಡ್ಡಿ ಮಲ್ಲಮ್ಮ ಸೇವಾ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಪ್ಯಾಟಿ ಹೇಳಿದರು.



ಗ್ರಾಮದಲ್ಲಿ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ 604ನೇ ಜಯಂತ್ಯುತ್ಸವ ಅಂಗವಾಗಿ ಆಯೋಜಿಸಿದ್ದ ಶ್ರೀ ಹೇಮರಡ್ಡಿ ಮಲ್ಲಮ್ಮ ತಾಯಿಯ ಭಾವಚಿತ್ರ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕಪ್ಪತ್ತಮಲ್ಲೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷ ಮಹೇಶ ಗಡಗಿ ಮಾತನಾಡಿ, “ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಧಾರ್ಮಿಕ ಮೌಲ್ಯಗಳನ್ನು ಬೆಳೆಸುವಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ಕೊಡುಗೆ ಅಪಾರವಾಗಿದೆ. ಅವರ ಜೀವನ ಚರಿತ್ರೆ ಸಮಾಜಕ್ಕೆ ಮಾದರಿಯಾಗಿದ್ದು, ಇಂತಹ ಮಹನೀಯರ ಜಯಂತಿಗಳನ್ನು ಆಚರಿಸುವುದರಿಂದ ಯುವಕರಲ್ಲಿ ಸಂಸ್ಕೃತಿ ಮತ್ತು ಭಕ್ತಿಭಾವ ಬೆಳೆಯಲು ಸಹಕಾರಿಯಾಗುತ್ತದೆ” ಎಂದು ತಿಳಿಸಿದರು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆದ ಭಾವಚಿತ್ರ ಮೆರವಣಿಗೆ ಶಿವಶಕ್ತಿ ಚಂಡಿಮೇಳ, ವಿವಿಧ ಕಲಾ ಪ್ರದರ್ಶನಗಳು ಹಾಗೂ ನೂರಕ್ಕೂ ಹೆಚ್ಚು ಮಹಿಳೆಯರ ಕುಂಭಮೇಳದೊಂದಿಗೆ ಕಂಗೊಳಿಸಿತು. ಮೆರವಣಿಗೆಯಲ್ಲಿ ಭಕ್ತರು ಜಯಘೋಷ ಮೊಳಗಿಸಿ ಭಕ್ತಿಭಾವ ಮೆರೆದರು. ಬಳಿಕ ಅನ್ನಸಂತರ್ಪಣೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಬಸವರಾಜ ಶಿರೋಳ, ಕಾರ್ಯದರ್ಶಿ ಶಶಿಕುಮಾರ ಸಣ್ಣಪ್ಯಾಟಿ, ಮಲ್ಲಣ್ಣ ಯರಾಶಿ, ವಿ.ಟಿ. ಮೇಟಿ, ಸಿ.ಟಿ. ಪ್ಯಾಟಿ, ಬಸುರಡ್ಡಿ ಬಂಡಿಹಾಳ, ಶರಣು ಬಂಡಿಹಾಳ, ಸುರೇಶ ಗಡಗಿ, ಮಹೇಶ ಕವಲೂರ, ಮುತ್ತಣ್ಣ ಕೊಂತಿಕಲ್ಲ, ಹೇಮಣ್ಣ ಕುಸುಗಲ್ಲ, ಶಿರಗೂರಪ್ಪ ಚಿಕರಡ್ಡಿ, ಪರಡ್ಡಿ ಬಾವಿ, ಕುಮಾರಡ್ಡಿ ಪ್ಯಾಟಿ, ಬಾಳಪ್ಪ ಗಡಗಿ, ಮುತ್ತಣ್ಣ ಅಣ್ಣಿಗೇರಿ, ಶ್ರೀದರ ಪ್ಯಾಟಿ, ಶಿವು ಕೆಂಚರಡ್ಡಿ, ಭೀಮಪ್ಪ ಗದಗಿನ, ಸಿದ್ದು ಗಡಗಿ, ಯಂಕಣ್ಣ ಗಡಗಿ, ಶಂಕ್ರಪ್ಪ ಗಡಗಿ, ಸಂತೋಷ ಮಾಳೆಕೊಪ್ಪ, ಜ್ಯೋತಿ ಬಾವಿ, ಜ್ಯೋತಿ ಗಡಗಿ, ರಾಜೇಶ್ವರಿ ಗಡಗಿ, ನಂದಿತಾ ಪ್ಯಾಟಿ, ನೀಲಾಂಬಿಕಾ ಗಡಗಿ, ಮಲ್ಲಮ್ಮ ಕುಸುಗಲ್ಲ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಹಾಗೂ ಅಪಾರ ಮಹಿಳೆಯರು ಭಾಗವಹಿಸಿದ್ದರು.

> “ಹೇಮರಡ್ಡಿ ಮಲ್ಲಮ್ಮ ಅವರ ತ್ಯಾಗ, ಭಕ್ತಿ ಮತ್ತು ಮಾನವೀಯ ಮೌಲ್ಯಗಳು ಸಮಾಜಕ್ಕೆ ಆದರ್ಶವಾಗಿವೆ.”
> **– ಮಲ್ಲಿಕಾರ್ಜುನ ಪ್ಯಾಟಿ, ಶ್ರೀ ಹೇಮರಡ್ಡಿ ಮಲ್ಲಮ್ಮ ಸೇವಾ** ಸಮಿತಿ ಅಧ್ಯಕ್ಷ

---

**ರೆಡ್‌ಕ್ರಾಸ್ ದಿನಾಚರಣೆ ಅಂಗವಾಗಿ ಕಾನೂನು ಮಹಾವಿದ್ಯಾಲಯದಲ್ಲಿ ಅಗ್ನಿ ಸುರಕ್ಷತಾ ಹಾಗೂ ಉಚಿತ ಕಣ್ಣಿನ ತಪಾಸಣೆ ಕಾರ್ಯಕ್ರಮ**

# ಅಗ್ನಿ ಅವಘಡ ತಡೆಗೆ ಜಾಗೃತಿ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ರೆಡ್‌ಕ್ರಾಸ್ ದಿನಾಚರಣೆ ಅಂಗವಾಗಿ ಯುವ ರೆಡ್‌ಕ್ರಾಸ್ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ಸಹಯೋಗದಲ್ಲಿ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ಹೆಚ್.ಸಿ.ಇ.ಎಸ್ ಕಾನೂನು ಮಹಾವಿದ್ಯಾಲಯದಲ್ಲಿ ಅಗ್ನಿ ಸುರಕ್ಷತಾ ಜಾಗೃತಿ ಹಾಗೂ ಉಚಿತ ಕಣ್ಣಿನ ತಪಾಸಣೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು.



ಗದಗ ಅಗ್ನಿಶಾಮಕ ಠಾಣೆ ಹಾಗೂ ಡಾ. ಮೆಹರವಾಡೆ ಕಣ್ಣಿನ ಆಸ್ಪತ್ರೆಯ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಗದಗದ ಅಧ್ಯಕ್ಷ ರಾಜೇಂದ್ರ ಗೋಡಬೋಲೆ ಮಾತನಾಡಿ, ರೆಡ್‌ಕ್ರಾಸ್ ಸಂಸ್ಥೆಯ ಇತಿಹಾಸ, ಸೇವಾ ಮನೋಭಾವ ಹಾಗೂ ಸಮಾಜದಲ್ಲಿ ಅದರ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಗದಗ ಅಗ್ನಿಶಾಮಕ ಠಾಣಾಧಿಕಾರಿ ಲೋಕೇಶ್ ಜಿ.ಕೆ. ಅವರು ಅಗ್ನಿ ಅವಘಡಗಳ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು, ಅಗ್ನಿಶಾಮಕ ಉಪಕರಣಗಳ ಬಳಕೆ ಹಾಗೂ ತುರ್ತು ಪರಿಸ್ಥಿತಿಯಲ್ಲಿ ಅನುಸರಿಸಬೇಕಾದ ಸುರಕ್ಷತಾ ಕ್ರಮಗಳ ಕುರಿತು ವಿವರಿಸಿದರು. ಅಗ್ನಿಶಾಮಕ ಸಾಧನಗಳ ಪ್ರಾಯೋಗಿಕ ಪ್ರದರ್ಶನದ ಮೂಲಕ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಯಿತು.

ಡಾ. ಮೆಹರವಾಡೆ ಕಣ್ಣಿನ ಆಸ್ಪತ್ರೆ ವತಿಯಿಂದ ವಿದ್ಯಾರ್ಥಿಗಳಿಗೆ ಉಚಿತ ಕಣ್ಣಿನ ಆರೋಗ್ಯ ತಪಾಸಣೆ ನಡೆಸಿ ಅಗತ್ಯ ಸಲಹೆ ಮತ್ತು ಮಾರ್ಗದರ್ಶನ ನೀಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯೆ ಶ್ರೀಮತಿ ಪಲ್ಲವಿ ಬುಯ್ಯಾರ ಮಾತನಾಡಿದರು. ಯುವ ರೆಡ್‌ಕ್ರಾಸ್ ಘಟಕದ ಕಾರ್ಯಕ್ರಮ ಅಧಿಕಾರಿ ಪ್ರೊ. ವಿಶ್ವನಾಥ್ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಹುಲಕೋಟಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರವಿ ಎಂ. ಮೂಲಿಮನಿ, ರಾಷ್ಟ್ರೀಯ ಸೇವಾ ಯೋಜನೆ ಘಟಕದ ಪ್ರೊ. ನಿಸಾರ್ ಅಹಮದ್, ಉಪನ್ಯಾಸಕರಾದ ಎಂ.ವಿ. ಹಿರೇಮಠ, ಪ್ರೊ. ನಾಜೀಮಾ ಎನ್. ಮುಲ್ಲಾ, ಶ್ರೀಕಾಂತ ಐಲಿ, ಸಿಬ್ಬಂದಿ ವರ್ಗ, ವಿದ್ಯಾರ್ಥಿ ಸಂಘಟನೆಯ ಪದಾಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಕುಮಾರ ಮಂಜುನಾಥ್ ದೇಸಾಯಿ ನಿರೂಪಿಸಿದರು. ಕುಮಾರ ಇಮಾಮ್ ಬಾಷಾ ವಂದಿಸಿದರು.

> “ಅಗ್ನಿ ಅವಘಡಗಳ ಸಂದರ್ಭದಲ್ಲಿ ಮುನ್ನೆಚ್ಚರಿಕೆ ಮತ್ತು ಜಾಗೃತಿಯೇ ಜೀವ ರಕ್ಷಿಸುವ ಪ್ರಮುಖ ಅಂಶ.”
> **– ಲೋಕೇಶ್ ಜಿ.ಕೆ.,** ಅಗ್ನಿಶಾಮಕ ಠಾಣಾಧಿಕಾರಿ

---

**ಸೂಡಿ ಜುಕ್ತಿ ಹಿರೇಮಠದಲ್ಲಿ ನೂತನ ರಥ ಲೋಕಾರ್ಪಣೆ, ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ವೈಭವ**

# ಶಾಂತಿ-ನೆಮ್ಮದಿಯ ಬದುಕಿಗೆ ಧರ್ಮವೇ ಮೂಲ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ/ರೋಣ

“ಅರಿವುಳ್ಳ ಮಾನವ ಜನ್ಮದಲ್ಲಿ ಅರಿತು ಬಾಳಿದರೆ ಬದುಕು ಬಂಗಾರವಾಗುತ್ತದೆ. ಮಹಾತ್ಮರ ಸಂದೇಶಗಳು ಎಲ್ಲರಿಗೂ ದಾರಿದೀಪವಾಗಿದ್ದು, ಶಾಂತಿ ಮತ್ತು ನೆಮ್ಮದಿಯ ಬದುಕಿಗೆ ಧರ್ಮವೇ ಮೂಲ” ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.



ಭಾನುವಾರ ಸೂಡಿ ಜುಕ್ತಿ ಹಿರೇಮಠದಲ್ಲಿ ನೂತನ ರಥ ಲೋಕಾರ್ಪಣೆ ಹಾಗೂ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ಅಂಗವಾಗಿ ನಡೆದ ಜನಜಾಗೃತಿ ಧರ್ಮ ಸಮ್ಮೇಳನದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಭೌತಿಕ ಬದುಕಿಗೆ ಸಂಪತ್ತು ಮಾತ್ರ ಸಾಕಾಗುವುದಿಲ್ಲ. ಧರ್ಮಪ್ರಜ್ಞೆ ಮತ್ತು ರಾಷ್ಟ್ರಪ್ರಜ್ಞೆಯೂ ಅಗತ್ಯವಾಗಿದ್ದು, ಯೋಗ್ಯ ಸಂಸ್ಕಾರದಿಂದಲೇ ಬದುಕು ಸಾರ್ಥಕಗೊಳ್ಳುತ್ತದೆ ಎಂದು ತಿಳಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಶಿವಾದ್ವೈತ ಸಿದ್ಧಾಂತ ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿದೆಯೆಂದು ಹೇಳಿದರು.

ಸೂಡಿ ಜುಕ್ತಿಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು ನಿರಂತರ ಶ್ರಮದಿಂದ ನೂತನ ರಥ ನಿರ್ಮಾಣ ಮಾಡಿದ್ದು ಶ್ಲಾಘನೀಯ ಕಾರ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ವೇಳೆ ಶ್ರೀಪೀಠದಿಂದ ರೇಶ್ಮೆ ಮಡಿ, ಸ್ಮರಣಿಕೆ, ಫಲ-ಪುಷ್ಪ ನೀಡಿ ಶುಭ ಹಾರೈಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಮಾತನಾಡಿ, ಮಠ-ಮಂದಿರಗಳು ಭಾರತೀಯ ಸಂಸ್ಕೃತಿಯ ಸಂರಕ್ಷಣಾ ಕೇಂದ್ರಗಳಾಗಿವೆ. ನೈತಿಕ ಮೌಲ್ಯಗಳು ಶಾಶ್ವತವಾಗಿದ್ದು, ಸೂಡಿ ಶ್ರೀಗಳ ಶ್ರಮ ಮತ್ತು ಭಕ್ತರ ಸಹಕಾರದಿಂದ ಇಂದಿನ ವೈಭವ ಸಾಧ್ಯವಾಗಿದೆ ಎಂದರು.

ಶ್ರೀಶೈಲ ಡಾ. ಚನ್ನಸಿದ್ಧರಾಮ ಜಗದ್ಗುರುಗಳು ಆಶೀರ್ವಚನ ನೀಡಿ, ಧರ್ಮದ ಅರಿವು ಎಷ್ಟು ತಿಳಿದರೂ ಅದು ಅಕ್ಷಯವಾಗಿಯೇ ಉಳಿಯುತ್ತದೆ. ವೀರಶೈವ ಧರ್ಮವು ವಿಶ್ವಬಂಧುತ್ವದ ಮೂಲಕ ಸಮಾಜದಲ್ಲಿ ಸಾಮರಸ್ಯ ಬೆಳೆಸುತ್ತಿದೆ ಎಂದು ಹೇಳಿದರು.

ಶ್ರೀ ಕಾಶಿ ಡಾ. ಚಂದ್ರಶೇಖರ ಜಗದ್ಗುರುಗಳು ಮಾತನಾಡಿ, ಧರ್ಮದ ದಾರಿ ಮೋಕ್ಷಕ್ಕೆ ಹೆದ್ದಾರಿಯಾಗಿದ್ದು, ಮಾನವೀಯ ಸಂಬಂಧಗಳು ಸಂಪತ್ತಿನ ನಡುವೆ ಕುಗ್ಗಬಾರದು ಎಂದು ತಿಳಿಸಿದರು.

ಶ್ರೀ ಕಾಶಿ ನೂತನ ಜಗದ್ಗುರು ಡಾ. ವಿಶ್ವಾರಾಧ್ಯ ಮಲ್ಲಿಕಾರ್ಜುನ ಭಗವತ್ಪಾದರು ಮಾತನಾಡಿ, ಧರ್ಮಾಚರಣೆ ಮರೆತರೆ ಸಮಾಜಕ್ಕೆ ಅಪಾಯ ಎದುರಾಗುತ್ತದೆ. ರಾಷ್ಟ್ರ ನಿರ್ಮಾಣದಲ್ಲಿ ಯುವಕರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ನಿವೃತ್ತ ಪೊಲೀಸ್ ಮಹಾನಿರ್ದೇಶಕ ಶಂಕರ್ ಬಿದರಿ ಮಾತನಾಡಿ, ಸಂಸ್ಕಾರದಿಂದ ಬದುಕು ಉಜ್ವಲಗೊಳ್ಳುತ್ತದೆ. ಸೂಡಿಯಲ್ಲಿ ನಡೆಯುತ್ತಿರುವ ಧಾರ್ಮಿಕ ಕಾರ್ಯಗಳು ಅತ್ಯಂತ ವೈಭವದಿಂದ ಜರುಗುತ್ತಿದ್ದು, ಇದಕ್ಕೆ ಸೂಡಿ ಕೊಟ್ಟೂರು ಬಸವೇಶ್ವರ ಶಿವಾಚಾರ್ಯರ ಶ್ರಮ ಕಾರಣ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಅಧ್ಯಕ್ಷರಾದ ಸಿಂದಗಿ ಸಾರಂಗಮಠದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ದಾನಿಗಳ ನಾಮಫಲಕ ಅನಾವರಣಗೊಳಿಸಿದರು. ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ ಗೌರವಾಧ್ಯಕ್ಷರಾದ ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಗ್ರಂಥ ಬಿಡುಗಡೆ ಮಾಡಿದರು.

ನೇತೃತ್ವ ವಹಿಸಿದ್ದ ಸೂಡಿ ಜುಕ್ತಿಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸೂಡಿ ಗ್ರಾಮದಲ್ಲಿ ಮೊದಲ ಬಾರಿಗೆ ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ನೂತನ ರಥ ಲೋಕಾರ್ಪಣೆ ನಡೆಯುತ್ತಿರುವುದು ಭಕ್ತರಿಗೆ ಸಂತಸ ತಂದಿದೆ ಎಂದರು.

ಈ ಸಂದರ್ಭದಲ್ಲಿ ಡಾ. ಸಂಗಮೇಶ ಸವದತ್ತಿಮಠ ಅವರಿಗೆ “ಭಾಷಾ ಭಾಸ್ಕರ” ಪ್ರಶಸ್ತಿ ಪ್ರದಾನ ಮಾಡಲಾಯಿತು. ನೂತನ ರಥ ನಿರ್ಮಾಣಕ್ಕೆ ಸಹಕರಿಸಿದ ದಾನಿಗಳನ್ನು ಜಗದ್ಗುರುಗಳು ಸನ್ಮಾನಿಸಿದರು.

ಬದಾಮಿ ಶಾಸಕ ಬಿ.ಬಿ. ಚಿಮ್ಮನಕಟ್ಟಿ, ರೋಣದ ಮಿಥುನ್ ಪಾಟೀಲ ಸೇರಿದಂತೆ ವಿವಿಧ ಮಠಾಧೀಶರು, ಗಣ್ಯರು ಮತ್ತು ಸಹಸ್ರಾರು ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

> “ಧರ್ಮ ಸತ್ಯ ಮತ್ತು ಪ್ರಾಮಾಣಿಕವಾಗಿ ಬದುಕಿದರೆ ಇದೇ ಜನ್ಮದಲ್ಲಿ ಸುಖ ದೊರೆಯುತ್ತದೆ.”
> **– ಡಾ. ವೀರಸೋಮೇಶ್ವರ** ಜಗದ್ಗುರುಗಳು

---

**₹14 ಲಕ್ಷಕ್ಕೂ ಅಧಿಕ ಮೌಲ್ಯದ ಚಿನ್ನಾಭರಣ ವಶ – ಇಬ್ಬರು ಆರೋಪಿಗಳು ಅರೆಸ್ಟ್**

# ಮನೆ ಬಾಗಿಲು ಮುರಿದು ಕಳ್ಳತನ ಮಾಡಿದ್ದ ಇಬ್ಬರ ಬಂಧನ




■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಮಿಲ್ಟಿ ಬಯಲು ಪ್ರದೇಶದಲ್ಲಿ ನಡೆದಿದ್ದ ಮನೆ ಕಳ್ಳತನ ಪ್ರಕರಣವನ್ನು ಭೇದಿಸುವಲ್ಲಿ ಹಗರಿಬೊಮ್ಮನಹಳ್ಳಿ ಪೊಲೀಸರು ಯಶಸ್ವಿಯಾಗಿದ್ದು, ಇಬ್ಬರು ಖದೀಮರನ್ನು ಬಂಧಿಸಿ ಸುಮಾರು ₹14.06 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ ಇತರ ಬೆಲೆಬಾಳುವ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಬಂಧಿತ ಆರೋಪಿಗಳನ್ನು ಕುಮಾರನಹಳ್ಳಿ ಆನಂದ್ (24), ಗದ್ದಿಕೇರಿ ನಿವಾಸಿ ಹಾಗೂ ಜಹಂಗೀರ್ ಬಾಷಾ (36), ಅರಳಿಹಳ್ಳಿ ನಿವಾಸಿ ಎಂದು ಗುರುತಿಸಲಾಗಿದೆ.

ಆರೋಪಿಗಳು ಟಿ.ಎಂ. ಚನ್ನಬಸಯ್ಯ ಎಂಬುವರ ಮನೆಯ ಬಾಗಿಲು ಮುರಿದು ಕಳ್ಳತನ ನಡೆಸಲಾಗಿತ್ತು. ಈ ಘಟನೆ ಸಾರ್ವಜನಿಕರಲ್ಲಿ ಆತಂಕ ಮೂಡಿಸಿತ್ತು.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ವಿಜಯನಗರ ಜಿಲ್ಲಾ ಪೊಲೀಸ್ ಅಧೀಕ್ಷಕಿ ಎಸ್. ಜಾಹ್ನವಿ ಐಪಿಎಸ್ ಅವರ ಮಾರ್ಗದರ್ಶನದಲ್ಲಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಮಂಜುನಾಥ್ ಹಾಗೂ ಕೂಡ್ಲಿಗಿ ವಿಭಾಗದ ಡಿವೈಎಸ್ಪಿ ಮಲ್ಲೇಶ್ ದೊಡ್ಡಮನಿ ನೇತೃತ್ವದಲ್ಲಿ ವಿಶೇಷ ತಂಡ ರಚಿಸಿ ಕಾರ್ಯಾಚರಣೆ ನಡೆಸಲಾಯಿತು.

ಪೊಲೀಸ್ ವೃತ್ತ ನಿರೀಕ್ಷಕ ವಿಕಾಸ್ ಪಿ. ಲಮಾಣಿ, ಪಿಎಸ್‌ಐ ಉಮಾಪತಿ, ತಾರಾಬಾಯಿ, ನಾಗರಾಜ್ ಕೊಟಗಿ ಹಾಗೂ ಸಿಬ್ಬಂದಿಗಳ ತಂಡ ಆರೋಪಿಗಳ ಬೆನ್ನಟ್ಟಿತ್ತು.

ಸಿಸಿಟಿವಿ ದೃಶ್ಯಗಳು, ತಾಂತ್ರಿಕ ಮಾಹಿತಿ ಹಾಗೂ ಗುಪ್ತಚರರ ನೆರವಿನಿಂದ ಆರೋಪಿಗಳ ಚಲನವಲನಗಳನ್ನು ಪತ್ತೆಹಚ್ಚಿ ಇಬ್ಬರನ್ನು ಬಂಧಿಸುವಲ್ಲಿ ಪೊಲೀಸರು ಯಶಸ್ವಿಯಾದರು.

ಪ್ರಕರಣ ಭೇದಿಸಿದ ಹಗರಿಬೊಮ್ಮನಹಳ್ಳಿ ಪೊಲೀಸರ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕಿ ಎಸ್. ಜಾಹ್ನವಿ ಪ್ರಶಂಸಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka